# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 92 SUNDAY 14-06-2026 PRGI No : KNKAN/26/A0962 Pages:4 Rs.2.00 M: 9742418836

## "ಸತ್ಯಕ್ಕೆ ಸಾವಿಲ್ಲ, ಸನಾತನ ಧರ್ಮವನ್ನು ಕೆಣಕಿದವರಿಗೆ ಉಳಿಗಾಲವಿಲ್ಲ, ಧರ್ಮದ ನೆಲೆಗಟ್ಟನ್ನು ಅಲ್ಲಾಡಿಸಲು ಹೋದ ಸಿದ್ದರಾಮಯ್ಯಗೆ ಕಾಲವೇ ತಕ್ಕ ಶಾಸ್ತಿ ಮಾಡಿದೆ"



ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಎಡಪಂಥೀಯ ಪಟಾಲಂ ಹಣೆದಿದ್ದ ನೀಚ ಸಂಚು ಇಂದು ನಡುರಸ್ತೆಯಲ್ಲಿ ಬೆತ್ತಲಾಗಿದೆ. ಮುಸುಕುಧಾರಿ ಚಿನ್ನಯ್ಯ ಎಂಬ ಅಯೋಗ್ಯನನ್ನು ಮುಂದಿಟ್ಟುಕೊಂಡು, ಕ್ಷೇತ್ರಕ್ಕೆ ಕಳಂಕ ಹಚ್ಚಲು ಕಾಂಗ್ರೆಸ್ ಹೆಣೆದಿದ್ದ 200 ಕೋಟಿ ರೂಪಾಯಿಗಳ ಬ್ರಹ್ಮಾಂಡ ಷಡ್ಯಂತ್ರದ ಮುಖವಾಡ ಇಂದು ಕಳಚಿ ಬಿದ್ದಿದೆ ಎಂದು ವಿಪಕ್ಷ ನಾಯಕ ಆರ್ ಅಶೋಕ್ ತೀವ್ರ ಟೀಕೆ ಮಾಡಿದ್ದಾರೆ.

ಟ್ವೀಟ್ ಮೂಲಕ ಕಿಡಿಕಾರಿರುವ ಅವರು, ಅಂದು ಸತ್ಯದ ಪರ ನಿಲ್ಲಬೇಕಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸುಳ್ಳು ಬುರುಡೆ ದಾಸನಿಗೆ ರೆಡ್ ಕಾರ್ಪೆಟ್ ಹಾಸಿ ವೈಭವೀಕರಿಸಿದ್ದರು. ಧರ್ಮದ ನೆಲೆಗಟ್ಟನ್ನು ಅಲ್ಲಾಡಿಸಲು ಹೋದ ಸಿದ್ದರಾಮಯ್ಯನವರಿಗೆ ಕಾಲವೇ ತಕ್ಕ ಶಾಸ್ತಿ ಮಾಡಿದೆ ಎಂದಿದ್ದಾರೆ.

ಅಂದು ಈ ಸನಾತನ ವಿರೋಧಿ ನೀತಿಯನ್ನು ಖಂಡಿಸಿ, ಧರ್ಮ ರಕ್ಷಣೆಗಾಗಿ ಬಿಜೆಪಿ ಧರ್ಮಸ್ಥಳ ಚಲೋ' ನಡೆಸಿ ಎಚ್ಚರಿಸಿತ್ತು. ಇಂದು ಆ ಹೋರಾಟಕ್ಕೆ ಜಯ ಸಿಕ್ಕಿದೆ, ಸತ್ಯ ಸೂರ್ಯನಂತೆ ಹೊರಬಂದಿದೆ. ಲಕ್ಷಾಂತರ ಭಕ್ತರ ಆರಾಧ್ಯ ದೈವಕ್ಕೆ, ಧರ್ಮಸ್ಥಳದ ಘನತೆಗೆ ಮಸಿ ಬಳಿಯಲು ಯತ್ನಿಸಿದ ಕಾಂಗ್ರೆಸ್ ಸರ್ಕಾರ ತಕ್ಷಣ ಕರ್ನಾಟಕದ ಜನತೆಯ ಬಹಿರಂಗ ಕ್ಷಮೆಯಾಚಿಸಬೇಕು. ಈ ಇಡೀ ಕೃತ್ಯದ ಹಿಂದಿರುವ ಸೂತ್ರಧಾರಿಗಳನ್ನು ಕಂಬಿ ಹಿಂದೆ ತಳ್ಳುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

## ಕರ್ತವ್ಯದಲ್ಲಿ ಬದ್ಧತೆ ಇರಲಿ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

ಬೆಂಗಳೂರು: ಜನಪರ ಮತ್ತು ಜನಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ 'ದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯತೆ ತೋರದೆ ಹೆಚ್ಚು ಬದ್ಧತೆಯಿಂದ ಕೆಲಸ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ತಾಕೀತು ಮಾಡಿದರು.

ರಾಜ್ಯದ ಮುಖ್ಯಮಂತ್ರಿಯಾದ ನಂತರ ಆಡಳಿತ ಯಂತ್ರಕ್ಕೆ ವೇಗ ನೀಡಲು ಮುಂದಾಗಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರು ಇಂದು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಜಿ.ಪಂ. ಸಿಇಓಗಳು ಹಾಗೂ ಪೊಲೀಸ್ ವರಿಷ್ಠಾಧಿ ಕಾರಿಗಳು ಮತ್ತು ವಿವಿಧ ಇಲಾಖೆ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಸಭೆ ನಡೆಸಿ ಆಡಳಿತ ಸುಗಮ, ಸಮರ್ಪಕ ಹಾಗೂ ಜನಪರ ಆಡಳಿತಕ್ಕೆ ಸಂಬಂಧಿಸಿದಂತೆ ಕೆಲವು ನಿರ್ದಿಷ್ಟ ಸಲಹೆ, ಸೂಚನೆಗಳನ್ನು ಅಧಿಕಾರಿಗಳಿಗೆ ನೀಡಿದರು.

ರಾಜ್ಯ ಸರ್ಕಾರ ಬಡವರು, ಹಿಂದುಳಿದವರು, ದಮನಿತರ ಕಲ್ಯಾಣಕ್ಕಾಗಿ ಹತ್ತು ಹಲವು ಯೋಜನೆಗಳನ್ನು ಜಾರಿ ಮಾಡಿದೆ. ಬಜೆಟ್‌ನಲ್ಲೂ ಹೊಸ ಯೋಜನೆಗಳನ್ನು ಘೋಷಣೆ ಮಾಡಲಾಗಿದೆ. ಈ ಎಲ್ಲಾ ಯೋಜನೆಗಳು ಸಮರ್ಪಕವಾಗಿ ಜಾರಿಯಾಗುವಂತೆ ನೋಡಿಕೊಳ್ಳಬೇಕು ಹಾಗೂ ಯಾರಿಗೆ ಯೋಜನೆಗಳನ್ನು ರೂಪಿಸಲಾಗಿದೆಯೇ ಆ ಯೋಜನೆಗಳ ಲಾಭ ಆ ವರ್ಗದವರಿಗೆ ಆಗುವಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳು ಸೂಚಿಸಿದರು.

ಯಾವುದೇ ಕಾರಣಕ್ಕೂ ಅಧಿಕಾರಿಗಳು




ಜನಪರ ಯೋಜನೆಗಳ ಜಾರಿ ವಿಚಾರದಲ್ಲಿ ವಿಳಂಬ ಧೋರಣೆ ತಾಳದೆ ಶೀಘ್ರ ಅನುಷ್ಠಾನಕ್ಕೆ ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಯಾವುದೇ ಅಧಿಕಾರಿ ಜನರ ಕಷ್ಟಗಳಿಗೆ ಸ್ಪಂದಿಸಬೇಕು. ಜನರ ಕಷ್ಟಗಳಿಗೆ ಸ್ಪಂದಿಸದೆ ಜನ ಕಲ್ಯಾಣ ಯೋಜನೆಗಳ ಜಾರಿ ವಿಚಾರದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನು ಅವರು ನೀಡಿದರು.

ದೂರದ ಊರುಗಳಿಂದ ಸಣ್ಣಪುಟ್ಟ ಸಮಸ್ಯೆಗಳನ್ನು ಹೊತ್ತು ಜನ ಬೆಂಗಳೂರಿಗೆ ಬರುವುದನ್ನು ತಪ್ಪಿಸಿ, ಜಿಲ್ಲಾಧಿಕಾರಿಗಳು ಜನರ ಬಳಿಗೆ ಹೋಗಿ ಅವರ ಸಮಸ್ಯೆಗಳನ್ನು ಆಲಿಸಿ ಪರಿಹಾರ ದೊರಕಿಸಬೇಕು ಎಂದು ಸೂಚಿಸಿದರು.

ತಾಲ್ಲೂಕು, ಹೋಬಳಿ ಮಟ್ಟದಲ್ಲಿ ಜನಸ್ಪಂದನ ಸಭೆಗಳನ್ನು ನಡೆಸುವ ಮೂಲಕ ಜನರ ಅಹವಾಲು ಆಲಿಸುವ ಕೆಲಸ ಅಧಿಕಾರಿಗಳು ಮಾಡಬೇಕು. ಹಾಗೆಯೇ ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸುವ ಕೆಲಸವೂ ಆಗಬೇಕಿದೆ ಎಂದು ಹೇಳಿದರು. ಆಡಳಿತ ಯಂತ್ರ ಇನ್ನು ಹೆಚ್ಚು ಚುರುಕಿನಿಂದ ಕೆಲಸ ಮಾಡಬೇಕಿದೆ. ಹಾಗಾಗಿ ಅಧಿಕಾರಿಗಳು ಹೆಚ್ಚು ಜವಾಬ್ದಾರಿ ಯಿಂದ ಕೆಲಸ ಮಾಡುವ ಮೂಲಕ ಸರ್ಕಾರಕ್ಕೆ ಒಳ್ಳೆಯ ಹೆಸರು ತರಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜನರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡಿದರೆ ನಿಮಗೂ ಹೆಸರು, ಸರ್ಕಾರಕ್ಕೂ ಹೆಸರು ಬರುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಕೆಲಸ ಮಾಡಿ. ಏನು ಮಾಡಿದರೂ ನಡೆದೀತು ಎಂಬ ಧೋರಣೆ ಬೇಡ ಎಂದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರುಗಳಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಪ್ರಿಯಾಂಕ ಖರ್ಗೆ, ಸತೀಶ್ ಜಾರಕಿಹೊಳಿ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಯತೀಂದ್ರ ಸಿದ್ದರಾಮಯ್ಯ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು, ಜಿಲ್ಲಾಧಿಕಾರಿಗಳು ಭಾಗವಹಿಸಿದ್ದರು.

### ಕಾನೂನು ಸುವ್ಯವಸ್ಥೆ: ಎಚ್ಚರ ವಹಿಸಿ

ಕರ್ನಾಟಕ ಸರ್ವಜನಾಂಗದ ಶಾಂತಿಯ ತೋಟವಾಗಿದೆ. ಈ ಶಾಂತಿಯ ತೋಟವನ್ನು ಮುಂದುವರೆಸಿಕೊಂಡು ಹೋಗಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಕಾನೂನು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳಿ. ಸಮಾಜಘಾತುಕ ಶಕ್ತಿಗಳು ತಲೆಎತ್ತದಂತೆ ಕಾರ್ಯನಿರ್ವಹಿಸಿ ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು. ಜನಸಾಮಾನ್ಯರಿಗೆ ಅನಗತ್ಯ ತೊಂದರೆ ಕೊಡಬೇಡಿ. ಅವರ ಜತೆ ಬಹಳ ಸಂಯಮ, ಸೌಜನ್ಯದಿಂದ ವರ್ತಿಸಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದರು.

ಕಂದಾಯ ಇಲಾಖೆ ಮತ್ತಷ್ಟು ಜನಪರವಾಗಬೇಕು. ಈ ಇಲಾಖೆ ರೈತರು ಮತ್ತು ಜನಸಾಮಾನ್ಯರಿಗೆ ನೇರ ಸಂಬಂಧಪಟ್ಟ ಇಲಾಖೆಯಾಗಿದ್ದು, ನಿಯಮಗಳ ನೆಪ ಹೇಳಿ ಯಾವುದನ್ನು ವಿಳಂಬ ಮಾಡಬೇಡಿ. ಭೂ ಪರಿವರ್ತನೆ ಇರಬಹುದು, ಭೂ ಮಂಜೂರಾತಿ ಇರಬಹುದು, ಖಾತೆ, ಪೋಡಿ ವಿಚಾರದಲ್ಲೂ ಅತ್ಯಂತ ಕ್ಷಿಪ್ರವಾಗಿ ಕೆಲಸಗಳು ಆಗಬೇಕು. ವಿಳಂಬ ಧೋರಣೆಯಾದರೆ ಅದನ್ನು ನಾನು ಸಹಿಸಲ್ಲ ಎಂದು ಹೇಳಿದರು.

## ಕಂಪನಿ ಒಪ್ಪಂದದ ಮಾಂಸದ ಕೋಳಿ ಸಾಕಾಣಿಕೆ; ಪ್ರತಿ ಕೆ ಜಿ ಗೆ 10/– ರೂ ಸರ್ಕಾರ ನಿಗದಿ ಮಾಡಿದ್ದು ಸ್ವಾಗತಾರ್ಹ



**ಬೆಳಗಾವಿ ವಾರ್ತೆ ಗೋಕಾಕ:** ಕಂಪನಿ ಜೊತೆಗೆ ಒಪ್ಪಂದ ಮಾಡಿಕೊಂಡು ಮಾಂಸದ ಕೋಳಿ ಸಾಕಾಣಿಕೆ ಮಾಡುತ್ತಿರುವ ಸಂಘಟನೆಯು ಹೋರಾಟದ ಫಲವಾಗಿ ಕನಿಷ್ಠ ಪ್ರತಿ ಕೆ ಜಿ ಗೆ 10/– ರೂ ಸರ್ಕಾರ ನಿಗದಿ ಮಾಡಿದ್ದು ಸ್ವಾಗತಾರ್ಹ ಎಂದು ಕೋಳಿ ಸಾಕಾಣಿಕೆ ರೈತರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಸಹ ಕಾಯರ್ದರ್ಶಿ ಅಡಿವೆಪ್ಪ ಬಿಲಕುಂದಿ ತಿಳಿಸಿದ್ದಾರೆ.

ಅವರು, ನಗರದಲ್ಲಿ ಕರೇದ ಪತ್ರಿಕಾಗೊಷ್ಠಿಯನ್ನು ಉದ್ಧೇಶಿಸಿ ಮಾತ ನಾಡಿ, ಕಂಪನಿ ಒಪ್ಪಂದದ ಮಾಂಸದ ಕೋಳಿ ಸಾಕಾಣಿಕೆ ನಿರ್ವಹಣಾ ವೆಚ್ಚ ದುಬಾರಿಯಾಗಿದ್ದು, ಲಾಭವಿಲ್ಲದೆ ಸಾವಿರಾರು ರೈತ ಕುಟುಂಬಗಳು ಹತ್ತಾರು ವರ್ಷದಿಂದ ಪ್ರತಿ ಕೆ ಜಿ ಗೆ 6ರೂ 25 ಪೈಸೆ ಕಂಪನಿಗಳಿಂದ ಪಡೆದು ನಷ್ಟ ಅನು ಭವಿಸಿದ್ದರು. ರೈತರ ಒಕ್ಕಟ್ಟು ರಾಜ್ಯ ಕೋಳಿ ಸಾಕಾಣಿಕೆ ರೈತರ ಕ್ಷೇಮಬಿವೃದ್ದಿ ಸಂಘದ ಹೋರಾಟಕ್ಕೆ ಜಯ ದೊರೆತಂತಾಗಿದೆ ಎಂದು ಹರ್ಷ ವ್ಯಕ್ತ ಪಡಿಸಿದರು.

ಇನ್ನೂ ಕೆಲವು ಬೇಡಿಕೆಗೆ ಒತ್ತಾಯಿಸಿ ಪಶುಪಾಲನಾ ಇಲಾಖೆ ಆಯುಕ್ತರಾದ ಶ್ರೀಮತಿ ಶಿಲ್ಪಾ ನಾಗ ಅವರಿಗೆ ಮನವಿ ಸಲ್ಲಿಸಲಾಗುತ್ತಿದೆ ಹಾಗಾಗಿ ಕೋಳಿ ಸಾಕಾಣಿಕೆ ರೈತರು ಒಕ್ಕಟ್ಟಾಗಿ ಸಂಘಟನೆಯ ಮುಖಾಂತರ ಬೇಡಿಕೆಗಳನ್ನು ಈಡೇರಿಸಿ ಕೊಳ್ಳಬೇಕಿದೆ. ಕನಿಷ್ಠ ಪ್ರತಿ ಕೆಜಿ ಗೆ 10/– ರೂ ನೀಡುವ ಬಗ್ಗೆ ಪಶುಪಾಲನಾ ಇಲಾಖೆಯ ಆದೇಶ ಆಗಿದ್ದರೂ ಕೂಡ ಕೆಲವು ಗೊಂದಲ ಸೃಷ್ಟಿಸುತ್ತಿರುವ ಕಂಪನಿಗಳ ಮೇಲೆ ಸೂಕ್ತ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು. ನಿರ್ವಹಣಾ ವೆಚ್ಚ ದುಬಾರಿಯಾಗಿರಿವುದರಿಂದ ಸರ್ಕಾರದಿಂದ ಪ್ರತಿ ಕೋಳಿಗೆ ರೂ 5ರೂಗಳಂತೆ ಕೆಎಮ್ ಎಫ್ ಹಾಲಿನ ರೈತರ ಮಾದರಿಯಲ್ಲಿ ಪ್ರೋತ್ಸಾಹ ಧನವನ್ನು ನೇರವಾಗಿ ರೈತರ ಖಾತೆಗೆ ಒದಗಿಸಬೇಕು. ಕೋಳಿ ಸಾಕಾಣಿಕೆ ಕೃಷಿಯ ಒಂದು ಅಂಗವಾಗಿದ್ದರಿಂದ ವಿದ್ಯುತ್‌ನ್ನು ಉಚಿತವಾಗಿ ಪೂರೈಸಬೇಕು. ಕೋಳಿ ಸಾಕಾಣಿಕೆ ರೈತರಿಗೆ ನೀಡುತ್ತಿರುವ ಕೆಸಿಸಿ 3 ಲಕ್ಷದ ಸಾಲದ ಮಿತಿಯನ್ನು 10 ಲಕ್ಷಕ್ಕೆ ಏರಿಸಬೇಕೆಂದರು. ಡಿಸಿಸಿ ಬ್ಯಾಂಕನಿಂದ ಪ್ರತಿ ರೈತರಿಗೆ 10ಲಕ್ಷದ ವರೆಗೆ ಬಡ್ಡಿ ರಹಿತ ಸಾಲ ನೀಡಬೇಕು. ಕಂಪನಿಯವರು ತಮಗೆ ಬಂದ ಲಾಭದ ಹಣದಲ್ಲಿ, ಕಂಪನಿಯವರು ವಿತರಿಸುತ್ತಿರುವ ಕೋಳಿ ಮರಿಗಳಿಗೆ ಇನ್ಶೂರೆನ್ಸ್ ಮಾಡಿಸಬೇಕು, ಹವಾಮಾನ ವೈಫರೀತ್ಯದಿಂದ ಕೋಳಿಗಳು ಸಾವನ್ನಪ್ಪಿದಾಗ ರೈತರ ಎಫ್‌ಸಿಆರ್ ಆದಾಯದಲ್ಲಿ ಕಡಿತಗೊಳಿಸಬಾರದು. ಸ್ವಾಮಿನಾಥನ್ ಆಯೋಗದ ಸಿಪಾರಸ್ಸಿನಂ ತೆ ಕ್ರಮ ಕೈಗೊಂಡು ರೈತರನ್ನು ಆರ್ಥಿ ಕವಾಗಿ ಸದೃಡಗೊಳಿಸಬೇಕೆಂದು ಒತ್ತಾಯಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಕೋಳಿ ಸಾಕಾಣಿಕೆಗೆ ನೂತನವಾಗಿ ಸಬ್ಸಿಡಿ ಯೋಜನೆಗನ್ನು ಜಾರಿಗೆ ತರಬೇಕು. ಇದರಿಂದ ಯುವಕರಿಗೆ ಉದ್ಯೋಗ ಮಾಡಲು ಪ್ರೋತ್ಸಾಹಿದಂತಾಗಿ ಉದ್ಯೋಗ ಸೃಷ್ಟಿಸಲು ಅನುಕೂಲವಾಗುತ್ತದೆ. ಹಾಗೂ ಮಾಂಸದ ಆಹಾರ ಉತ್ಪಾದನೆಗೆ ಒತ್ತು ಕೊಟ್ಟಂತೆ ಆಗುತ್ತದೆ ಅಂತಾ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಲ್ಲಪ್ಪ ಇಂಗಳಿ, ರಾಮಪ್ಪ ದಬಾಡಿ, ಸುರೇಶ ಬಡ್ಲಿ, ಶಿವಬಸು ಹಾದರಗಿ ಸೇರಿದಂತೆ ಇತರರು ಇದ್ದರು.

## ಕಾಡಿನಲ್ಲಿ ನಾಪತ್ತೆಯಾಗಿದ್ದ 65 ವರ್ಷದ ವೃದ್ಧನನ್ನು ರಕ್ಷಿಸಿದ ಅರಣ್ಯ ಸಿಬ್ಬಂದಿ!



**ಬೆಳಗಾವಿ ವಾರ್ತೆ ಬೆಳಗಾವಿ:** ಅರಣ್ಯ ಇಲಾಖೆ ಮತ್ತು ಹೆಮ್ಮಡಗ ಗ್ರಾಮಸ್ಥರು ರಾತ್ರಿಯಿಡೀ ನಡೆಸಿದ ಸಂಘಟಿತ ಶೋಧ ಕಾರ್ಯಾಚರಣೆಯಲ್ಲಿ ಖಾನಾಪುರ ತಾಲ್ಲೂಕಿನ ಭೀಮಗಢ ವನ್ಯಜೀವಿ ಅಭಯಾರಣ್ಯದ ದಟ್ಟ ಅರಣ್ಯದಲ್ಲಿ ಕಾಣೆಯಾಗಿದ್ದ 65 ವರ್ಷದ ವ್ಯಕ್ತಿಯನ್ನು ರಕ್ಷಿಸಿದ್ದಾರೆ.

ಹೆಮ್ಮಡಗ ಗ್ರಾಮದ ನಿವಾಸಿ ಹೆಮ್ಮಣ್ಣ ಮದಾರ್ ಜೂನ್ 10 ರಂದು ತನ್ನ ದನಗಳನ್ನು ಮೇಯಿಸಲು ಕಾಡಿಗೆ ಹೋಗಿ ನಾಪತ್ತೆಯಾಗಿದ್ದರು. ದನಗಳು ಸಂಜೆಯ ವೇಳೆಗೆ ಮನೆಗೆ ಮರಳಿದರೂ ಮದಾರ್ ಹಿಂತಿರುಗಲಿಲ್ಲ, ಇದು ಕುಟುಂಬ ಸದಸ್ಯರು ಮತ್ತು ಗ್ರಾಮಸ್ಥರಲ್ಲಿ ಆತಂಕ ಮೂಡಿಸಿತು.

ಭೀಮಗಢ ವನ್ಯಜೀವಿ ಅಭಯಾರಣ್ಯವು ಹುಲಿಗಳು, ಚಿರತೆಗಳು, ಕರಡಿಗಳು ಸೇರಿದಂತೆ ಹಲವಾರು ಕಾಡು ಪ್ರಾಣಿಗಳಿಗೆ ನೆಲೆಯಾಗಿದೆ. ಹೀಗಾಗಿ ಪರಿಸ್ಥಿತಿ ಆತಂಕಕಾರಿಯಾಗಿತ್ತು. ಅರಣ್ಯ ಅಧಿಕಾರಿಗಳು ತಕ್ಷಣ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು.

ಗ್ರಾಮಕ್ಕೆ ಹಿಂತಿರುಗುವಾಗ ದಾರಿ ತಪ್ಪಿದ ಮದಾರ್ ಡೊಂಗರ್ಗಾಂವ್ ರಸ್ತೆಯ ಬಳಿಯ ಮಲ್ಕಿ ಫಾರ್ಮ್ ಬಳಿಯ ದೊಡ್ಡ ಬಂಡೆಯ ಕೆಳಗೆ ಆಶ್ರಯ ಪಡೆದಿರುವುದನ್ನು ಕಂಡುಕೊಂಡರು. ನಂತರ ಅವರನ್ನು ಮನೆಗೆ ಸುರಕ್ಷಿತವಾಗಿ ಕರೆತರಲಾಯಿತು.

## ಧಾರವಾಡ ಜೈಲು ಅಧಿಕಾರಿ ಆತ್ಮಹತ್ಯೆ: ಸಾವಿಗೆ ಡಿಜಿಪಿ ಅಲೋಕ್ ಕುಮಾರ್ ಕಿರುಕುಳ ಕಾರಣ ಎಂದ ಪತ್ನಿ!

**ಬೆಳಗಾವಿ ವಾರ್ತೆ ಧಾರವಾಡ:** ಸೇವೆಯಿಂದ ಅಮಾನತು ಗೊಂಡಿದ್ದ ಧಾರವಾಡ ಕೇಂದ್ರ ಕಾರಾಗೃ ಹದ ಜೈಲರ್ ಸಿದ್ಧರಾಮಪ್ಪ ವಡ್ಡರ್(37) ಅವರು ಶುಕ್ರವಾರ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಇಂದು ಧಾರವಾಡ ಹೊಸ ಬಸ್ ನಿಲ್ದಾಣದ ಬಳಿ ಇರುವ ಕಾರಾಗೃಹದ ವಸತಿ ಗೃಹದಲ್ಲಿ ಸಿದ್ಧರಾಮಪ್ಪ ಅವರು ಅತ್ಮಹತ್ಯೆಗೆ ಶರಣಾಗಿದ್ದಾರೆ.

ಕಳೆದ ಎರಡು ತಿಂಗಳ ಹಿಂದೆ ಅಮಾನತ್ತಾಗಿದ್ದ ಸಿದ್ಧರಾಮಪ್ಪ ಅವರನ್ನು ಮೈಸೂರು ಕಾರಾಗೃಹಕ್ಕೆ ವರ್ಗಾವಣೆ ಮಾಡಲಾಗಿತ್ತು. ಆದರೆ ಇಂದು ಬೆಳಗ್ಗೆ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂ ಡಿದ್ದಾರೆ.

ಸಿದ್ದರಾಮಪ್ಪ ಅವರ ಪತ್ನಿ ಲಕ್ಷ್ಮಿ ಅವರು, ತಮ್ಮ ಪತಿ ಸಾವಿಗೆ ಕಾರಾಗೃಹ ಡಿಜಿಪಿ ಅಲೋಕ್ ಕುಮಾರ್ ಅವರ ಕಿರುಕುಳವೇ ಕಾರಣ ಎಂದು ಗಂಭೀರ ಆರೋಪ ಮಾಡಿದ್ದಾರೆ. ಅಲೋಕ್ ಕುಮಾರ್ ಕಿರುಕುಳದಿಂದ ನನ್ನ ಪತಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅಲೋಕ್ ಕುಮಾರ್ ಸರ್ ಅವರೇ ನನ್ನ ಗಂಡನ ಜೀವ ಪಡೆದಿದ್ದಾರೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ನನ್ನ ಪತಿ ಸಸ್ಪೆಂಡ್ ಮಾಡಿದ್ದಾರೆ, ಜೈಲಿಗೆ ಹಾಕ್ತಾರೆ ಅನ್ನೋ ಭಯದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರನ್ನು ಸಸ್ಪೆಂಡ್ ಮಾಡಿ ಮೈಸೂರಿಗೆ ವರ್ಗಾವಣೆ ಮಾಡಿದ್ರು, ಮೈಸೂರಿಗೆ ಕರ್ತವ್ಯಕ್ಕೆ ಹಾಜರಾಗಲು ಹೊರಟ್ಟಿದ್ದರು. ಆದ್ರೆ ತಂದೆ, ತಾಯಿ ಮುಖ ನೋಡಿ ಹೋಗ್ತಿನಿ ಅಂತ ಹೀಗೆ ಮಾಡಿಕೊಂಡರು. ತಮ್ಮ ಮೇಲೆ ಕ್ರಮ ಆಗುತ್ತೇ ಏನ್ ಮಾಡಬೇಕು ಅಂತಿದ್ರು. ಯಾವಾಗಲೂ ನನ್ನ ಅಲೋಕ್ ಕುಮಾರ್ ಜೈಲಿಗೆ ಕಳಿಸ್ತಾರೆ ಅಂತಿದ್ರು ಎಂದು ಅಲೋಕ್ ಕುಮಾರ್ ಅವರ ಭಯದಲ್ಲೇ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮೃತ ಜೈಲಾಧಿಕಾರಿ ಪತ್ನಿ ಲಕ್ಷ್ಮಿ ಆರೋಪಿಸಿದ್ದಾರೆ.

### ಅಮಾನತ್ತಾಗಿದ್ದ ಜೈಲರ್!

ಜೈಲರ್ ಸಿದ್ಧರಾಮಪ್ಪ ಅವರನ್ನು ಕಳೆದ ಎರಡು ತಿಂಗಳ ಹಿಂದೆ ಜೈಲಿನಲ್ಲಿ ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಅಮಾನತ್ತು ಮಾಡಲಾಗಿತ್ತು. ಬಳಿಕ ಜೈಲರ್ ಸಿದ್ದರಾಮಪ್ಪ ಅವರನ್ನು ಮೈಸೂರಿಗೆ ವರ್ಗಾವಣೆ ಮಾಡಲಾಗಿತ್ತು. ಆದರೆ ಇನ್ನು ಮೈಸೂರಿಗೆ ಹೋಗಿ ವರದಿ ಮಾಡಿಕೊಂಡಿರಲಿಲ್ಲ. ಆದ್ರೆ, ಜೈಲರ್ ಸಿದ್ದರಾಮಪ್ಪ ಇಂದು ದುಡುಕಿನ ನಿರ್ಧಾರ ತೆಗೆದುಕೊಂಡಿದ್ದಾರೆ.







**ಬೆಳಗಾವಿ ವಾರ್ತೆ ಬಾಗಲಕೋಟೆ:** ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ವನಮಾಲಾ ಯಾದವ ಅವರು ಸ್ಥಳೀಯ ಬಿ.ವ್ಹಿ.ವ್ಹಿ.ಸಂಘದ ಎಸ್.ಸಿ.ನಂದಿಮಠ ಕಾನೂನು ಮಹಾ ವಿದ್ಯಾಲಯದಲ್ಲಿ ಆಯೋಜಿಸಿದ ದಿ.ಡಾ.ಆನಂದರಾವ ನಾರಾಯಣರಾವ ಯಾದವ ಸ್ಮರಣಾರ್ಥ ಹುಬ್ಬಳ್ಳಿ ವಲಯಮಟ್ಟದ ಚರ್ಚಾಸ್ಪರ್ಧೆಯನ್ನು ಉದ್ಘಾಟಿಸುತ್ತಿರುವದು.

## ಶಾಸಕ ಸಿ.ಎಸ್. ನಾಡಗೌಡರಿಗೆ ಸಚಿವ ಸ್ಥಾನ ನೀಡಲು ಒತ್ತಾಯ ನಿರ್ಲಕ್ಷಿಸಿದರೆ ಸಾಮೂಹಿಕ ರಾಜೀನಾಮೆ: ಕಾಂಗ್ರೆಸ್ ಮುಖಂಡರ ಎಚ್ಚರಿಕೆ




**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಸತತ ಆರು ಬಾರಿ ಶಾಸಕರಾಗಿ ಆಯ್ಕೆಯಾಗಿ, ಕ್ಷೇತ್ರವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುತ್ತಿರುವ ಹಿರಿಯ ರಾಜಕಾರಣಿ ಸಿ.ಎಸ್. ನಾಡ ಗೌಡ (ಅಪ್ಪಾಜಿ) ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಂಪುಟ ದರ್ಜೆಯ ಸ್ಥಾನ ನೀಡಬೇಕು ಎಂದು ಕಾಂಗ್ರೆಸ್ ಪಕ್ಷದ ಎಸ್‌ಸಿ ಘಟಕದ ತಾಲ್ಲೂಕು ಉಪಾಧ್ಯಕ್ಷ ಸಂಗಮೇಶ ವಿಜಯಕರ ಆಗ್ರಹಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಗೌಡ ಅವರು ಜಾತಿ–ಧರ್ಮಗಳ ಭೇದವಿಲ್ಲದೆ ಸಮಾಜದ ಎಲ್ಲಾ ವರ್ಗದ ಜನರನ್ನು ಒಗ್ಗೂಡಿಸಿ ಕೆಲಸ ಮಾಡುತ್ತಿರುವ ಮಹಾನ್ ನಾಯಕರು. ಈ ಹಿಂದೆ ಅವರು ಮೈಸೂರು ಸ್ಯಾಂಡಲ್ ಸೋಪ್ ನಿಗಮದ ಅಧ್ಯಕ್ಷರಾಗಿದ್ದಾಗ, ನಿಗಮವನ್ನು ನಷ್ಟದಿಂದ ಪಾರು ಮಾಡಿ ಅತ್ಯಧಿಕ ಲಾಭ ಗಳಿಸುವಂತೆ ಮಾಡಿದ್ದರು. ಅಂತಹ ಅನುಭವಿ ನಾಯಕರಿಗೆ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡುವುದು ಪಕ್ಷದ ಬಲವರ್ಧನೆಗೆ ಸಹಕಾರಿಯಾಗಲಿದೆ.

ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಬಿ ಕೆ ಹರಿಪ್ರಸಾದ ಹಾಗೂ ಮುಖ್ಯಮಂತ್ರಿ ಡಿ ಕೆ ಶಿವಕುಮಾರ ಕೂಡಲೇ ಮಧ್ಯಪ್ರವೇಶಿಸಿ ಶಾಸಕ ಸಿ.ಎಸ್. ನಾಡಗೌಡ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ವಿನಂತಿಸಿದರು.

ಒಂದು ವೇಳೆ ತಮ್ಮ ನ್ಯಾಯಯುತ ಬೇಡಿಕೆಯನ್ನು ಪಕ್ಷದ ಹೈಕಮಾಂಡ್ ನಿರ್ಲಕ್ಷಿಸಿದಲ್ಲಿ, ತಾಲ್ಲೂಕಿನ ಕಾಂಗ್ರೆಸ್ ಪಕ್ಷದ ಎಲ್ಲಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸಾಮೂಹಿಕವಾಗಿ ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಲು ಸಿದ್ಧರಿದ್ದೇವೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ವಿರೇಶ ಭಜಂತ್ರಿ, ಪಂಚ ಗ್ಯಾರಂಟಿ ಸಮಿತಿ ಸದಸ್ಯ ಸಂಗಮೇಶ ಚಲವಾದಿ, ಮುಖಂಡರಾದ ಮುತ್ತಣ್ಣ ಒಡ್ಡೊವಡಗಿ, ಶರಣಪ್ಪ ಚಲವಾದಿ, ಬಸವರಾಜ ಗೋನಾಳ ಸೇರಿದಂತೆ ಹಲವು ಕಾರ್ಯಕರ್ತರು ಇದ್ದರು.

## ದಲಿತ ಕವಿ ಡಾ. ಸಿದ್ದಲಿಂಗಯ್ಯ ಅವರ ನುಡಿ ನಮನ



**ಬೆಳಗಾವಿ ವಾರ್ತೆ ವಿಜಯಪುರ:** ಇಲ್ಲಿನ ಸರ್ಕಾರಿ ಎಸ್ಸಿ, ಎಸ್ಟಿ ನೌಕರರ ಸಮನ್ವಯ ಸಮಿತಿಯ ಕಛೇರಿಯಲ್ಲಿ ದಲಿತ ಕವಿ,ಬಂಡಾಯ ಕವಿ ನಾಡೋಜ ಪ್ರಶಸ್ತಿ ಪಡೆದ ಬಡವರ ನಗುವಿನ ಶಕ್ತಿ, ಮಾನಸ ಪುತ್ರ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ. ಸಿದ್ದಲಿಂಗಯ್ಯನವರ ನುಡಿ ನಮನ ಕಾರ್ಯಕ್ರಮ ಗುರುವಾರ ಆಯೋಜಿಸಲಾಗಿತ್ತು.

ಸಿದ್ಧಲಿಂಗಯ್ಯನವರ 5ನೇ ಪುಣ್ಯ ತಿಥಿ ದಿನದ ನಿಮಿತ್ತ ಕರ್ನಾಟಕ ರಾಜ್ಯ ಸರ್ಕಾರಿ ಎಸ್ಸಿ, ಎಸ್ಟಿಕವಿ ಸಿದ್ದಲಿಂಗಯ್ಯನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪುಣ್ಯತಿಥಿ ಆಚರಿಸಲಾಯಿತು.

ಜಿಲ್ಲಾ ಅಧ್ಯಕ್ಷ ಬಿ.ಎಚ್. ನಾಡಗಿರಿ ಅವರು ಮಾತನಾಡಿ, ಕನ್ನಡ ಸಾಹಿತ್ಯ ಲೋಕದಲ್ಲಿ ಕವಿ ಸಿದ್ದಲಿಂಗಯ್ಯನವರು ಆಳವಾದ ವಿಮರ್ಶಾತ್ಮಕ ವಿಚಾರಗಳನ್ನು ಹಾಗೂ ಅವರ ಸಂಘಟನಾ ಶಕ್ತಿಯನ್ನು ಸ್ಮರಿಸಿದರು. ದಲಿತರ ಕುರಿತು ಅಪಾರವಾದ ವಿಚಾರಗಳನ್ನು ಅವರ ಕವನಗಳ ಮೂಲಕ ಸಮಾಜವನ್ನು ತಿದ್ದುವ ಕೆಲಸ ಮಾಡಿದರು. ಅವರ ನೋವುಗಳನ್ನು ಬರವಣಿಗೆ ಮೂಲಕ ಸಾಹಿತ್ಯವನ್ನು ರಚಿಸಿದರು ಎಂದರು.

ಜಿಲ್ಲಾ ಗೌರವಾಧ್ಯಕ್ಷ ಬಸವಂತ ಗುಣದಾಳ ಮಾತನಾಡಿ, ಡಾ. ಸಿದ್ದಲಿಂಗಯ್ಯನವರು ಸಮಾಜದ ಬಗ್ಗೆ ಅತೀವ ಕಾಳಜಿಯನ್ನು ಹೊಂದಿದ್ದರು. ಅವರು ಸಣ್ಣ ವಯಸ್ಸಿನಲ್ಲೇ ನಮ್ಮನ್ನು ಅಗಲಿದ್ದಾರೆ. ಪ್ರಧಾನ ಕಾರ್ಯದರ್ಶಿ ಡಾ. ಸೂರ್ಯಕಾಂತ ಹೊಸಮನಿ ಮಾತನಾಡಿ, ಡಾ. ಸಿದ್ದಲಿಂಗಯ್ಯನವರು ದಲಿತಪರ ಸಾಮಾಜಿಕ ಕಳಕಳಿಯ ಹೊಂದಿದ ಚಿಂತಕರು. ಅವರು ಶೋಷಿತ ನೌಕರರ ಬಗ್ಗೆ ಅಪಾರ ಗೌರವ ಕಾಳಜಿ ಉಳ್ಳವರಾಗಿದ್ದರು ಎಂದರು. ಈ ಕಾರ್ಯಕ್ರಮದಲ್ಲಿ ರಾಜ್ಯ ಸಲಹಾ ಸಮಿತಿಯ ಸದಸ್ಯರಾದ ಮುದ್ದಣ್ಣ ಭೀಮನಗರ, ಉಪಾಧ್ಯಕ್ಷ ರವಿ ಯಲಡಗಿ, ಎಸ್.ಎಮ್. ಡೋಣಿ, ಸಹ ಕಾರ್ಯದರ್ಶಿ ವಿಜಯಕುಮಾರ ಮುದ್ದೇಬಿಹಾಳ, ಸಂಘಟನಾ ಕಾರ್ಯದರ್ಶಿ ನಿಜು ಮೇಲಿನಕೇರಿ ಮತ್ತಿತರರು ಇದ್ದರು. ಜಿಲ್ಲಾ ಕೋಶಾಧ್ಯಕ್ಷ ಮಹೇಶ ಹೊನ್ನಾಕಟ್ಟಿ ಸ್ವಾಗತಿಸಿದರು. ಜಿ.ಎಮ್ ಚಲವಾದಿ ವಂದಿಸಿದರು.

## ಮುದ್ದೇಬಿಹಾಳದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ: ಪ್ರಜಾಪ್ರಭುತ್ವ ಬಲವರ್ಧನೆಗೆ ಬಿಜೆಪಿ ಕರೆ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ :** ಮತದಾರರ ಹಕ್ಕುಗಳ ಸಂರಕ್ಷಣೆ ಮತ್ತು ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿರುವ 'ಸ್ಪೆಷಲ್ ಇಂಟೆನ್ಸಿವ್ ರಿವಿಶನ್' (ಎಸ್‌ಅರ್‌ಐ) ಕಾರ್ಯಕ್ರಮದ ಪೂರ್ವಭಾವಿ ಸಭೆಯು ರಾಜ್ಯ ರೈತ ಮೋರ್ಚಾ ಅಧ್ಯಕ್ಷರು ಹಾಗೂ ಮಾಜಿ ಶಾಸಕ ಎ.ಎಸ್. ಪಾಟೀಲ್ (ನಡಹಳ್ಳಿ) ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ಜರುಗಿತು.

ಪಟ್ಟಣದ ಮಾಜಿ ಶಾಸಕ ನಡಹಳ್ಳಿ ಅವರ ನಿವಾಸದಲ್ಲಿ ಬುಧವಾರ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, "ಪ್ರಜಾಪ್ರಭುತ್ವದ ಹಬ್ಬವಾದ ಚುನಾವಣೆಯಲ್ಲಿ ಪ್ರತಿಯೊಬ್ಬ ನಾಗರಿಕನ ಪಾಲ್ಗೊಳ್ಳುವಿಕೆ ಅತ್ಯಗತ್ಯ. ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ಪಾರದರ್ಶಕವಾಗಿ ನಡೆಯಬೇಕು. ಕ್ಷೇತ್ರದ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ" ಎಂದು ಕಿವಿಮಾತು ಹೇಳಿದರು.

**ಸಭೆಯ ಪ್ರಮುಖ ನಿರ್ಣಯಗಳು:**

ಸಭೆಯಲ್ಲಿ ಮತದಾರರ ನೋಂದಣಿಗೆ ಒತ್ತು ನೀಡಲು ನಿರ್ಧರಿಸಲಾಯಿತು. ವಿಶೇಷವಾಗಿ 18 ವರ್ಷ ತುಂಬಿದ ಯುವ ಮತದಾರರನ್ನು ನೋಂದಾಯಿಸುವುದು, ಅರ್ಹ ಮತದಾರರ ಹೆಸರುಗಳನ್ನು ಪಟ್ಟಿಗೆ ಸೇರ್ಪಡೆ ಮಾಡುವುದು ಹಾಗೂ ತಿದ್ದುಪಡಿಗಳಿದ್ದಲ್ಲಿ ಅವುಗಳನ್ನು ಸರಿಪಡಿಸಲು ಕಾರ್ಯಕರ್ತರಿಗೆ ಸೂಚನೆ



ನೀಡಲಾಯಿತು. ಅಲ್ಲದೆ, ಪ್ರಜಾಪ್ರಭುತ್ವದ ಮಹತ್ವದ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಸಕ್ರಿಯವಾಗಿ ಕೆಲಸ ಮಾಡಲು ನಿರ್ಧರಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ತಾಲ್ಲೂಕು ಅಧ್ಯಕ್ಷ ಜಗದೀಶ್ ಪಂಪಣ್ಣವರ, ಸೋಮನಗೌಡ ಬಿರಾದಾರ, ಗಿರೀಶಗೌಡ ಪಾಟೀಲ ಮುರಾಳ, ಮಂಜುನಾಥಗೌಡ ಪಾಟೀಲ, ಸಂಗಮ್ಮ ದೇವರಳ್ಳಿ, ಗೌರಮ್ಮ ಹುನಗುಂದ, ಮುತ್ತಣ್ಣ ಹುಗ್ಗಿ, ಸಂಜು ಬಾಗೇವಾಡಿ, ನಾಗೇಶ ಕವಡಿಮಟ್ಟಿ, ಲಕ್ಷ್ಮಣ ಬಿಜ್ಜೂರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಜಿಲ್ಲೆಯ ವಸತಿ ಶಾಲೆಗಳಲ್ಲಿನ ಖಾಲಿ ಸೀಟುಗಳ ಭರ್ತಿಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಕೊಪ್ಪಳ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳಲ್ಲಿ 2026–27ನೇ ಸಾಲಿಗೆ ಖಾಲಿ ಇರುವ ಸೀಟುಗಳನ್ನು ಭರ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾಯ ರ್ನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರು ವ 7ನೇ, 8ನೇ, 9ನೇ ತರಗತಿಯ ಸೀಟುಗಳನ್ನು ಭರ್ತಿ ಮಾಡಿಕೊಳ್ಳುವ ಬಗ್ಗೆ ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಹಂತದಲ್ಲಿ ಅರ್ಜಿಗಳನ್ನು ಆಹ್ವಾನಿಸಿರುವ ಮಾಹಿತಿಯನ್ನು ಜಿಲ್ಲಾ ವೆಬ್‌ಸೈಟ್ www.koppal.nic.in ನಲ್ಲಿ ಪಡೆದು ಆಸಕ್ತ ಅಭ್ಯರ್ಥಿಗಳು ಜೂನ್ 30 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು & ಆಯ್ಕೆ ಸಮಿತಿಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಷ್ಯನ್ ಆಟ್ಯಾಪಟ್ಯಾದಲ್ಲಿ ಗದಗದ ಯುವಕರ ಚಿನ್ನದ ಸಾಧನೆ



**ಬೆಳಗಾವಿ ವಾರ್ತೆ ಗದಗ:** ಅಂತರರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಗದಗ ಜಿಲ್ಲೆಯ ಇಬ್ಬರು ಯುವ ಕ್ರೀಡಾಪಟುಗಳು ಸಾಧನೆ ಮೆರೆದಿದ್ದು, ಭೂತಾನ್‌ನಲ್ಲಿ ನಡೆದ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಾಧಕರಾದ ರಾಹುಲ್ ಶೇಖರ್ ಕಾರಭಾರಿ ಹಾಗೂ ಉಳವೇಶ ಶಿವಾಜಿ ಲಮಾಣಿ ಅವರನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಸನ್ಮಾನಿಸಿ ಅಭಿನಂದಿಸಿದರು.

ಜೂನ್ 7 ರಿಂದ 10ರವರೆಗೆ ಭೂತಾನ್‌ನಲ್ಲಿ ನಡೆದ 3ನೇ ಸೀನಿಯರ್ ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ತಂಡವನ್ನು ಪ್ರತಿನಿಧಿಸಿದ್ದ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಶಿಂಗಟರಾಯನಕೇರಿ ತಾಂಡಾದ ಕ್ರೀಡಾಪಟು ರಾಹುಲ್ ಶೇಖರ್ ಕಾರಭಾರಿ ಅವರು ತಮ್ಮ ತಂಡದೊಂದಿಗೆ ಭರ್ಜರಿ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಮುಡಿಗೇರಿಸಿಕೊಂಡರು. 15 ಆಟಗಾರರನ್ನು ಒಳಗೊಂಡಿದ್ದ ಭಾರತೀಯ ತಂಡವು ಪ್ರತಿಸ್ಪರ್ಧಿಗಳನ್ನು ಮಣಿಸಿ ಪ್ರಶಸ್ತಿ ಗೆಲ್ಲುವ ಮೂಲಕ ದೇಶದ ಕೀರ್ತಿಯನ್ನು ಹೆಚ್ಚಿಸಿತು.

ಅದೇ ರೀತಿ ಜೂನ್ 4 ರಿಂದ 6ರವರೆಗೆ ಭೂತಾನ್‌ನಲ್ಲಿ ನಡೆದ ಪ್ರಥಮ ಜೂನಿಯರ್ (ಅಂಡರ್–19) ಏಷ್ಯನ್ ಆಟ್ಯಾಪಟ್ಯಾ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ದೇವಿಹಾಳ ತಾಂಡಾದ ಯುವ ಕ್ರೀಡಾಪಟು ಉಳವೇಶ ಶಿವಾಜಿ ಲಮಾಣಿ ಅವರು ಭಾರತೀಯ ತಂಡದ ನಾಯಕನಾಗಿ ಕಾರ್ಯನಿರ್ವಹಿಸಿ ತಂಡವನ್ನು ವಿಜಯದತ್ತ ಮುನ್ನಡೆಸಿದರು. ಅವರ ನೇತೃತ್ವದ 15 ಸದಸ್ಯರ ತಂಡ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಜಯಿಸಿತು.

ಜಿಲ್ಲಾಡಳಿತ ಭವನದಲ್ಲಿ ನಡೆದ ಸನ್ಮಾನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಇಬ್ಬರು ಕ್ರೀಡಾಪಟುಗಳ ಸಾಧನೆಯನ್ನು ಶ್ಲಾಘಿಸಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಗದಗ ಜಿಲ್ಲೆಯ ಹೆಸರು ಬೆಳಗಿಸಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು. ಗ್ರಾಮೀಣ ಭಾಗದ ಯುವಕರು ಪರಿಶ್ರಮ ಮತ್ತು ಪ್ರತಿಭೆಯಿಂದ ವಿಶ್ವಮಟ್ಟದ ಸಾಧನೆ ಮಾಡಿರುವುದು ಇತರ ಯುವಕರಿಗೂ ಸ್ಫೂರ್ತಿದಾಯಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎಚ್.ಕೆ. ಪಾಟೀಲ ಹಾಗೂ ಶಾಸಕ ಜಿ.ಎಸ್. ಪಾಟೀಲ ಅವರು ದೂರವಾಣಿ ಮೂಲಕ ಕ್ರೀಡಾಪಟುಗಳೊಂದಿಗೆ ಮಾತನಾಡಿ ಅಭಿನಂದನೆ ಸಲ್ಲಿಸಿದರು. ಅಂತರರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಪದಕ ಗೆದ್ದು ಜಿಲ್ಲೆ ಹಾಗೂ ರಾಜ್ಯದ ಕೀರ್ತಿಯನ್ನು ಹೆಚ್ಚಿಸಿರುವ ಇವರ ಸಾಧನೆ ಶ್ಲಾಘನೀಯವಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸಾಧನೆಗಳನ್ನು ಮಾಡುವಂತೆ ಹಾರೈಸಿದರು.

ಭಾರತೀಯ ಆಟ್ಯಾಪಟ್ಯಾ ತಂಡಗಳ ಈ ಸಾಧನೆ ದೇಶದ ಕ್ರೀಡಾ ಕ್ಷೇತ್ರಕ್ಕೆ ಹೊಸ ಉತ್ತೇಜನ ನೀಡಿದ್ದು, ಗದಗ ಜಿಲ್ಲೆಯ ಕ್ರೀಡಾ ಪ್ರತಿಭೆಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿರುವುದು ಜಿಲ್ಲೆಯ ಜನತೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಮನೋಜ್ ರಾಠೋಡ, ಕ್ರೀಡಾ ಸಾಧಕ ಯುವಕರ ಪಾಲಕರು, ಸ್ನೇಹಿತರು, ತರಬೇತುದಾರರು ಹಾಜರಿದ್ದರು.

## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

### ಪ್ರತಿ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕು ಇದೆ : ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ.

**ಬೆಳಗಾವಿ ವಾರ್ತೆ ಧಾರವಾಡ:** ಬಾಲಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ ಜಾರಿಯಾದ ನಂತರ 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗಕ್ಕೆ ನೇಮಿಸಬಾರದು. ಮಕ್ಕಳನ್ನು ಹೋಟೆಲ್, ಗ್ಯಾರೇಜ್ ಹಾಗೂ ಇತರೆ ಕೆಲಸಗಳಿಗೆ ನೇಮಿಸುವುದು ಕಾನೂನುಬಾಹಿರವಾಗಿ ದ್ದು, ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಇಂದು (ಜೂ.12) ಬೆಳಿಗ್ಗೆ ಧಾರವಾಡ ರಾಮನಗರದ ಆದರ್ಶ ಬಾಲಿಕಾ ಪ್ರೌಢ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘ, ಶಾಲಾ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟದ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಪ್ರತಿಜ್ಞಾವಿಧಿ ಬೋಧಿಸಿ, ಮಾತನಾಡಿದರು.

ಸರ್ಕಾರವು ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡಲು ಶಾಲೆಗಳಲ್ಲಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಹಾಲು ಹಾಗೂ ಮಧ್ಯಾಹ್ನದ ಬಿಸಿಯೂಟ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ. ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಿ ಸರ್ಕಾರದ ಸೌಲಭ್ಯಗಳ ಪ್ರಯೋಜನ ಪಡೆಯಬೇಕು ಎಂದು ಅವರು ಹೇಳಿದರು.

ಮಕ್ಕಳು ದುಡಿಮೆಯಲ್ಲಿ ತೊಡಗಿಸಿಕೊಳ್ಳುವುದಕ್ಕಿಂತ ಶಿಕ್ಷಣ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ಶಿಕ್ಷಣದ ಮೂಲಕ ಉತ್ತಮ ಜ್ಞಾನ, ಕೌಶಲ್ಯಗಳನ್ನು ಗಳಿಸಿ ಮುಂದಿನ ದಿನಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಅವಕಾಶಗಳನ್ನು ಪಡೆದುಕೊಳ್ಳಬಹುದು ಎಂದು ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ



ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ. ಎಂ. ಬಡಿಗೇರ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ರೀತಿಯ ದುಡಿಮೆಗೆ ತೊಡಗಿಸಬಾರದು. ಮಕ್ಕಳು ಕಡ್ಡಾಯವಾಗಿ ಶಿಕ್ಷಣ ಪಡೆಯುವ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕು ಇದ್ದು, ಪೋಷಕರು ಹಾಗೂ ಸಮಾಜವು ಮಕ್ಕಳನ್ನು ಶಾಲೆಗೆ ಕಳುಹಿಸುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ಸಹಕರಿಸಬೇಕು. ಮಕ್ಕಳು ಈ ದೇಶದ ಅಭಿವೃದ್ಧಿಯ ಪಥಗಳಾಗಿದ್ದು, ಅವರಿಗೆ ಉತ್ತಮ ಶಿಕ್ಷಣ ಮತ್ತು ಸುರಕ್ಷಿತ ವಾತಾವರಣ ಒದಗಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ದುಡಿಮೆ ಮಾಡುತ್ತಿರುವ ಮಕ್ಕಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ: 1098 ಗೆ ಕರೆ ಮಾಡಿ, ಮಕ್ಕಳನ್ನು ರಕ್ಷಣೆ ಮಾಡಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು.

ಭಾರತೀಯ ಶಿಕ್ಷಣ ಪ್ರಸಾರ ಸಮಿತಿ ಅಧ್ಯಕ್ಷ ವಿಜಯಾನಂದ ಶೆಟ್ಟಿ ಅವರು ಮಾತನಾಡಿ, ಮಕ್ಕಳು ದೇಶದ ಭವಿಷ್ಯ. ಅವರಿಗೆ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆಯನ್ನು ಒದಗಿಸಬೇಕು. ಆದರೆ ಕೆಲ ಮಕ್ಕಳು ಬಡತನ ಹಾಗೂ ಇತರ ಕಾರಣಗಳಿಂದ ಶಾಲೆಗೆ ಹೋಗದೆ ದುಡಿಮೆಯಲ್ಲಿ ತೊಡಗುತ್ತಾರೆ. 14 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಹಾಕುವುದು ಕಾನೂನುಬಾಹಿರ. ಮಕ್ಕಳಿಗೆ ದುಡಿಮೆ ಬೇಡ, ಶಿಕ್ಷಣ ಬೇಕು. ಪ್ರತಿಯೊಬ್ಬ ಮಗುವೂ ಶಾಲೆಗೆ ಹೋಗಿ ತನ್ನ ಕನಸುಗಳನ್ನು ನನಸು ಮಾಡಿಕೊಳ್ಳುವ ಅವಕಾಶ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಆಯೋಜಿಸಿದ್ದ ಪ್ರಬಂಧ, ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾ ಕಾರ್ಮಿಕ ಅಧಿಕಾರಿ ಅಕ್ಬರ್ ಹಬೀಬಸಾಬ ಮುಲ್ಲಾ ಅವರು ಸ್ವಾಗತಿಸಿದರು. ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘದ ಯೋಜನಾ ನಿರ್ದೇಶಕ ಬಸವರಾಜ ಸಿ. ಪಂಚಾಕ್ಷರಿಮಠ ನಿರೂಪಿಸಿದರು. ಹಿರಿಯ ಕಾರ್ಮಿಕ ನಿರೀಕ್ಷಕ ಅಕ್ರಮ್ ಅಲ್ಲಾಪುರ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಬಿ. ವಾಯ್. ಪಾಟೀಲ, ಸಹಾಯಕ ಕಾರ್ಮಿಕ ಆಯುಕ್ತ ಸಚಿನ್. ವಾಯ್. ಹಳೇಮನಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಮಾರಿಕಾಂಬಾ ಹುಲಕೋಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ವೀರನಗೌಡ ಪಾಟೀಲ್, ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ತಿಮ್ಮಾಪೂರ, ಪೊಲೀಸ್ ಅಧಿಕಾರಿ ರಾಮನ ಗೌಡ್ರು, ಕಿಡ್ಸ್ ಸಂಸ್ಥೆ ಕಾರ್ಯದರ್ಶಿ ಅಶೋಕ ಯರಗಟ್ಟಿ, ಹಿರಿಯ ಕಾರ್ಮಿಕ ನಿರೀಕ್ಷಕರಾದ ಅಶೋಕ ಒಡೆಯರ್, ಭುವನೇಶ್ವರಿ ಕೋಟಿಮಠ, ಮೀನಾಕ್ಷಿ ಶಿಂದಿಹಟ್ಟಿ, ಸಂಗೀತಾ ಬೆನಕನಕೊಪ್ಪ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಜಾಥಾ ಕಾರ್ಯಕ್ರಮ: ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಆಯೋಜಿಸಲಾದ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ ಎಂ. ಬಡಿಗೇರ್ ಚಾಲನೆ ನೀಡಿದರು.

ಜಾಥಾ ಕಾರ್ಯಕ್ರಮವು ಆದರ್ಶ ಬಾಲಿಕಾ ಪ್ರೌಢಶಾಲೆಯಿಂದ ಆರಂಭವಾಗಿ ಲೈನ್ ಬಜಾರ್, ಸಂಗಮ ಸರ್ಕಲ್ ಮಾರ್ಗವಾಗಿ ಎನ್‌ಟಿಟಿಎಫ್ ವರೆಗೆ ಸಾಗಿತು. ಈ ಸಂದರ್ಭದಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ನೈಸರ್ಗಿಕ ವಿಪತ್ತು, ಜಾಗತಿಕ ಮಾನವೀಯ ಬಿಕ್ಕಟ್ಟಿನ ಸಮಯದಲ್ಲಿ ಲೈಂಗಿಕ ಮತ್ತು ಸಂತಾನೋತ್ಪತ್ತಿಗೆ ಸಂಬಂಧಿಸಿದ ಕನಿಷ್ಠ ಆರಂಭಿಕ ಸೇವಾ ಪ್ಯಾಕೇಜ ತುಂಬಾ ಅವಶ್ಯಕ: ಜಿಲ್ಲಾಧಿಕಾರಿ ಸ್ನೇಹಲ್ ಆರ್



**ಬೆಳಗಾವಿ ವಾರ್ತೆ ಧಾರವಾಡ:** ನೈಸರ್ಗಿಕ ವಿಪತ್ತು, ಹವಾಮಾನ ಬದಲಾವಣೆ, ಸಶಸ್ತ್ರ ಸಂಘರ್ಷ, ಸಾಂಕ್ರಾಮಿಕ ರೋಗಗಳು ಮತ್ತು ಸಂಕೀರ್ಣ ತುರ್ತುಸ್ಥಿತಿ ಮುಂತಾದ ಜಾಗತಿಕ ಮಾನವೀಯ ಬಿಕ್ಕಟ್ಟಿನ ಸಮಯದಲ್ಲಿ ಲೈಂಗಿಕ ಮತ್ತು ಸಂತಾನೋತ್ಪತ್ತಿಗೆ ಸಂಬಂಧಿಸಿದ ಕನಿಷ್ಠ ಆರಂಭಿಕ ಸೇವಾ ಪ್ಯಾಕೇಜ ತುಂಬಾ ಅವಶ್ಯಕವಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಇಂದು (ಜೂ.12) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ನೈಸರ್ಗಿಕ ವಿಪತ್ತಿನ ಸಂದರ್ಭದಲ್ಲಿ ಲೈಂಗಿಕ ಮತ್ತು ಸಂತಾನೋತ್ಪತ್ತಿಗೆ ಸಂಬಂಧಿಸಿದ ಕನಿಷ್ಠ ಆರಂಭಿಕ ಸೇವಾ ಪ್ಯಾಕೇಜ ಅಧ್ಯಾಯ ವನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾದಿ ,ಕಾರ ಕ್ರಿಯಾ ಯೋಜನೆಯಲ್ಲಿ ಸೇರಿಸುವ ಕುರಿತ ಸಭೆಯಲ್ಲಿ ಮಾತನಾಡಿದರು.

ಬಿಕ್ಕಟ್ಟಿನ ಪರಿಸ್ಥಿತಿಗಳಲ್ಲಿ ಬಾಲ್ಯವಿವಾಹ, ಅತ್ಯಾಚಾರ, ಲೈಂಗಿಕ ಹಿಂಸೆ, ಅಸುರಕ್ಷಿತ ಗರ್ಭಪಾತಗಳು, ಎಚ್.ಐ.ವ್ಹಿ ಸೇರಿದಂತೆ ಲೈಂಗಿಕ ರೋಗಗಳು ಹೆಚ್ಚಾಗುವ ಸಾಧ್ಯತೆಗಳಿರುತ್ತವೆ. ಈ ಪರಿಸ್ಥಿತಿಯಲ್ಲಿ ಗೌಪ್ಯ ಮತ್ತು ಸುರಕ್ಷಿತ ಲೈಂಗಿಕ ಹಾಗೂ ಸಂತಾನೋತ್ಪತ್ತಿ ಆರೋಗ್ಯ ಸೇವೆಗಳನ್ನು ಒದಗಿಸುವುದು ತುಂಬಾ ಅಗತ್ಯ ಇರುತ್ತದೆ. ವಿಪತ್ತುಗಳು ಸಂಭವಿಸಿದಾಗ ಜನರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಅವಶ್ಯವಾಗಿರುತ್ತದೆ. ಪರಿಸ್ಥಿತಿಯನ್ನು ಎದುರಿಸಲು ಅಗತ್ಯ ಸೂಕ್ತ ಕ್ರಮಗಳನ್ನು ವಿವಿಧ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯ ಸಾಧಿಸಿ, ಕ್ರಮಗಳನ್ನು ಕೈಗೊಳ್ಳಬೇಕು. ಆ ನಿಟ್ಟಿನಲ್ಲಿ ಪೂರ್ವ ತಯಾರಿಗಳನ್ನು ಕೈಗೊಳ್ಳುವುದು ಬಹಳ ಮುಖ್ಯವಾಗಿ ರುತ್ತದೆ ಎಂದು ಅವರು ತಿಳಿಸಿದರು.

ನವಜಾತ ಶಿಶುಗಳು ಹಾಗೂ ಗರ್ಭಿಣಿಯರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಆರೋಗ್ಯ ಮತ್ತು ನೈರ್ಮಲ್ಯದ ಬಗ್ಗೆ ಹೆಚ್ಚಿನ ಕ್ರಮಗಳನ್ನು ವಹಿಸಬೇಕು. ನೈಸರ್ಗಿಕ ವಿಪತ್ತಿನ ಸಂದರ್ಭದಲ್ಲಿ ಲೈಂಗಿಕ ಮತ್ತು ಸಂತಾನೋತ್ಪತ್ತಿಗೆ ಸಂಬಂಧಿಸಿದ ಕನಿಷ್ಠ ಆರಂಭಿಕ ಸೇವಾ ಪ್ಯಾಕೇಜ ಅಧ್ಯಾಯ ವನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಈ ಕ್ರಿಯಾ ಯೋಜನೆಯನ್ನು ಅಳವಡಿಸಿಕೊಳ್ಳಲಾಗುವುದು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಲೈಂಗಿಕ ಮತ್ತು ಸಂತಾನೋತ್ಪತ್ತಿ ಕುರಿತು ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ಈ ಕುರಿತು ಕುಟುಂಬದ ಸದಸ್ಯರು ಹಾಗೂ ನೆರೆಹೊರೆಯವರೊಂದಿಗೆ ಚರ್ಚಿಸಬೇಕು. ಆರೋಗ್ಯ ಹಾಗೂ ಶಿಕ್ಷಣ ಇಲಾಖೆಗಳು ಪ್ರಚಾರದ ಕುರಿತು ಹೆಚ್ಚಿನ ಒತ್ತು ನೀಡಬೇಕು. ಯಾವುದೇ ರೀತಿಯ ಹಿಂಜರಿಕೆ ಮನೋಬಾವವನ್ನು ಹೊಂದಿರಬಾರದು. ಪ್ರಕರಣಗಳು ಕಂಡುಬಂದಲ್ಲಿ ಅವುಗಳ ಇತ್ಯರ್ಥಕ್ಕೆ ಮುಂದಾಗಬೇಕು. ಲೈಂಗಿಕ ಆರೋಗ್ಯದ ಬಗ್ಗೆ ಅರಿವು ಮೂಡಿಸುವುದು ಅಗತ್ಯವಿದೆ ಎಂದು ಅವರು ಹೇಳಿದರು.

ಎಫ್.ಪಿ.ಎ.ಐ ಪ್ರಧಾನ ವ್ಯವಸ್ಥಾಪಕಿ ಸುಜಾತಾ ಎಸ್. ಆನಿಶೆಟ್ಟರ ಮಾತನಾಡಿ, ಲೈಂಗಿಕ ಮತ್ತು ಸಂತಾನೋತ್ಪತ್ತಿ ಆರೋಗ್ಯ ಅಗತ್ಯಗಳನ್ನು ಪರಿಹರಿಸಲು ಎಫ್.ಪಿ.ಎ.ಐ.ಯು ಎಸ್.ಆರ್.ಎಚ್. ಕನಿಷ್ಟ ಆರಂಭಿಕ ಸೇವೆ ಪ್ಯಾಕೇಜನ್ನು ಒದಗಿಸುವಲ್ಲಿ ಮುಂಚೂಣಿಯಲ್ಲಿದೆ. ಮಾನವೀಯ ನೆಲೆಗಟ್ಟಿನಲ್ಲಿ ಅಗತ್ಯವಿರುವ ಜನರಿಗೆ ಜೀವ ರಕ್ಷಿಸಲು ಸರ್ಕಾರ ಮತ್ತು ಸರ್ಕಾರೇತರ ಸ್ವಯಂಸೇವಾ ಸಂಸ್ಥೆಗಳು ಹಾಗೂ ಯುವಜನರೊಂದಿಗೆ ಕೆಲಸ ಮಾಡುತ್ತದೆ. ಎಫ್.ಪಿ.ಎ.ಐ ಪಾಲುದಾರ ಸಂಸ್ಥೆಗಳ ಸಹಯೋಗದೊಂದಿಗೆ ಜಿಲ್ಲಾ ಮತ್ತು ತಾಲ್ಲೂಕ ಸಮಿತಿಗಳೊಂದಿಗೆ ಚರ್ಚಿಸಿ, ಒಗ್ಗೂಡಿಸಿ ಎಸ್.ಆರ್.ಎಚ್. ಕನಿಷ್ಟ ಆರಂಭಿಕ ಸೇವೆ ಪ್ಯಾಕೇಜ ಒದಗಿಸಲು ಸನ್ನದ್ಧಗೊಳಿಸುತ್ತಿದೆ. ಈ ಅಧ್ಯಾಯವನ್ನು ಜಿಲ್ಲಾ ವಿಪತ್ತು ನಿರ್ವಹಣಾ ಕ್ರಿಯಾ ಯೋಜನೆಯಲ್ಲಿ ಸೇರಿಸುವಂತೆ ವಿನಂತಿಸಿಕೊಂಡರು.

ಕನಿಷ್ಟ ಆರಂಭಿಕ ಸೇವಾ ಪ್ಯಾಕೇಜ ಅಧ್ಯಾಯವನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಅಳವಡಿಸಿಕೊಳ್ಳುವಂತೆ ಎಫ್.ಪಿ.ಎ.ಐ ಪ್ರಧಾನ ವ್ಯವಸ್ಥಾಪಕಿ ಸುಜಾತಾ ಎಸ್. ಆನಿಶೆಟ್ಟರ ಅವರು ಮನವಿ ಮಾಡಿದರು.

ವೇದಿಕೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಎಫ್.ಪಿ.ಎ.ಐ ಉಪಾಧ್ಯಕ್ಷೆ ಸಂಗೀತಾ ಮಾನೆ ಅವರು ಇದ್ದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಸೇರಿದಂತೆ ಎಲ್ಲ ತಾಲೂಕುಗಳ ತಹಶೀಲ್ದಾರರು, ಎಲ್ಲ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026–27 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಮಲ್ಲಸಮುದ್ರ ಇಲ್ಲಿ ಸಮಾಜ ವಿಜ್ಞಾನ ವಿಷಯಗಳನ್ನು ಭೋಧಿಸಲು ಅರ್ಹ ಅತಿಥಿ ಉಪನ್ಯಾಸಕರ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ,ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನವಾಗಿದೆ.

ಅರ್ಹ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲಾತಿಗಳನ್ನು ಪ್ರಾಂಶುಪಾಲರು, ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ, ಮಲ್ಲಸಮುದ್ರದ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮಲ್ಲಸಮುದ್ರ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗೆ ಸಂಪರ್ಕಿಸಬುಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕ ಪದ್ಧತಿ ನಿವಾರಣೆಗೆ ಶಿಕ್ಷಣವೇ ಅಸ್ತ್ರ: ಸಂತೋಷ ಬಂಡೆ




**ಬೆಳಗಾವಿ ವಾರ್ತೆ ವಿಜಯಪುರ:** ಮಕ್ಕಳು ದೇಶದ ಭವಿಷ್ಯದ ಆಸ್ತಿ. ಮಕ್ಕಳ ಕೈಯಲ್ಲಿ ಪುಸ್ತಕವಿರಬೇಕು, ದುಡಿಮೆಯ ಆಯುಧ ಅಲ್ಲ. ಪ್ರತಿ ಮಗುವಿಗೂ ಗುಣಮಟ್ಟದ ಶಿಕ್ಷಣ ಮತ್ತು ಸುರಕ್ಷಿತ ಬಾಲ್ಯವನ್ನು ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಶುಕ್ರವಾರ ಇಂಡಿ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಅಂತಾರಾಷ್ಟ್ರೀಯ ಬಾಲ ಕಾರ್ಮಿಕ ವಿರೋಧಿ ದಿನವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಬಾಲ ಕಾರ್ಮಿಕ ಪದ್ಧತಿಯು ಮಕ್ಕಳ ಬಾಲ್ಯ, ಆರೋಗ್ಯ, ಶಿಕ್ಷಣ ಕಸಿದುಕೊಳ್ಳುವ ಸಾಮಾಜಿಕ ಪಿಡುಗು. ಅದು ದೇಶದ ಭವಿಷ್ಯಕ್ಕೆ ಮಾರಕ. ಇದರ ನಿರ್ಮೂಲನೆಗೆ ಶಿಕ್ಷಣವೇ ಅಸ್ತ್ರವಾಗಿದ್ದು, ಎಲ್ಲ ಮಕ್ಕಳನ್ನು ಶಿಕ್ಷಣದ ಮುಖ್ಯ ವಾಹಿನಿಗೆ ತಂದು ಮಕ್ಕಳ ಸುಂದರ ಭವಿಷ್ಯಕ್ಕೆ ದಾರಿಯಾಗೋಣ ಎಂದು ಹೇಳಿದರು.

ಮುಖ್ಯ ಶಿಕ್ಷಕ ಕೆ.ಐ. ಮಕಾನದಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಾಲ ಕಾರ್ಮಿಕ ಪದ್ಧತಿಯಿಂದ ಮಕ್ಕಳ ದೈಹಿಕ, ಮಾನಸಿಕ ಬೆಳವಣಿಗೆ ಸಂಪೂರ್ಣ ಕುಂಠಿತಗೊಳ್ಳುತ್ತದೆ. ಅವರು ಶಿಕ್ಷಣದಿಂದ ವಂಚಿತರಾಗುವುದರಿಂದ ಅವರ ಭವಿಷ್ಯವೇ ಕತ್ತಲೆಯಾಗುತ್ತದೆ. ನಾವೆಲ್ಲರೂ ಒಗ್ಗೂಡಿ ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡೋಣ ಎಂದು ಹೇಳಿದರು.

ಶಿಕ್ಷಕರಾದ ಎಸ್.ಎಸ್. ಅರಬ, ಎನ್.ಬಿ. ಚೌಧರಿ, ಎಸ್.ಪಿ. ಪೂಜಾರಿ, ಅತಿಥಿ ಶಿಕ್ಷಕ ಅಫ್ತಾಬ್ ಮುಲ್ಲಾ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

# ಉದ್ಯೋಗ ಮೇಳ : 15 ರಂದು ನೇರ ಸಂದರ್ಶನ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಜೂನ್ 15 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ಈ ನೇರ ಸಂದರ್ಶನದಲ್ಲಿ ಐಡಿಎಫ್‌ಸಿ ಫಸ್ಟ್ ಬ್ಯಾಂಕ್ ಭಾಗವಹಿಸಲಿದ್ದು, ಬಾಗಲಕೋಟೆ, ಮುಧೋಳ ಮತ್ತು ಬೀಳಗಿ ಬ್ರ್ಯಾಂಚ್‌ಗಳಿಗೆ ಅಸೋಶಿಯೇಟ್ ರಿಲೇಷನ್‌ಶಿಪ್ ಮ್ಯಾನೇಜರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

19 ರಿಂದ 28 ವಯೋಮಿತಿಯಲ್ಲಿರುವ ಯಾವುದೇ ಪದವೀಧರರು ಭಾಗವಹಿಸಬಹುದಾಗಿದ್ದು, ಆಸಕ್ತ ಅಭ್ಯರ್ಥಿಗಳು ತಮ್ಮ ಬಯೋಡಾಟಾ ಮತ್ತು ಮೂಲ ಅಂಕ ಪಟ್ಟಿಗಳ ಝರಾಕ್ಸ್ ಪ್ರತಿಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235337ಗೆ ಸಂಪರ್ಕಿಸಬಹುದಾಗಿದೆ.

# ಸಂಗೀತ ಕಲಾವಿದ ಅಂಬಣ್ಣ ಸುದ್ದಿಗೋಷ್ಠಿ: ಕುಟುಂಬದ ಜೀವಕ್ಕೆ ಅಪಾಯ: ಆರೋಪಿಗಳ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ




**ಬೆಳಗಾವಿ ವಾರ್ತೆ ಬಳ್ಳಾರಿ:** ತಮ್ಮ ಮೇಲೆ ಅಪಹರಣ, ಮಾರಣಾಂತಿಕ ಹಲ್ಲೆ, ಜಾತಿ ನಿಂದನೆ, ಹಣ ದೋಚಿಕೆ ಹಾಗೂ ಜೀವ ಬೆದರಿಕೆ ನಡೆಸಲಾಗಿದೆ ಎಂದು ಆರೋಪಿಸಿರುವ ಸಂಗೀತ ಕಲಾವಿದ ದಳವಾಯಿ ಅಂಬಣ್ಣ ಹಾಗೂ ಅವರ ಸಹೋದರ ವೀರೇಶ್, ಸಂಬಂಧಪಟ್ಟ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಯನ್ನು ಆಗ್ರಹಿಸಿದರು.

ನ ' ಗ ' ರ ' ದ ' ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಂಬಣ್ಣ, ಮೇ 20ರಂದು ಪರಿಚಯಸ್ಥ ನಿರಂಜನ ಮುಂಡರಗಿ ದೂರವಾಣಿ ಮೂಲಕ ಸಂಪರ್ಕಿಸಿ, ಸಂಗೀತ ಕಾರ್ಯಕ್ರಮದ ಕುರಿತು ಚರ್ಚೆ ನಡೆಸಲು ಮೇ 21ರಂದು ಭೇಟಿಯಾಗುವಂತೆ ತಿಳಿಸಿದ್ದರು ಎಂದು ಹೇಳಿದರು.

ಸಿರುಗುಪ್ಪ ಬಸ್ ನಿಲ್ದಾಣದ ಬಳಿ ಕರೆಯಿಸಿಕೊಂಡು ಇನ್ನೋವಾ ಕಾರಿನಲ್ಲಿ ಬಳ್ಳಾರಿಗೆ ಕರೆತಂದು, ಕೋಟೆ ಪ್ರದೇಶದ ಕಚೇರಿ ಹಾಗೂ ಖಾಸಗಿ ಹೋಟೆಲ್‌ಗೆ ಕರೆದೊಯ್ದು ಕೊಠಡಿಯಲ್ಲಿ ಕೂಡಿ ಹಾಕಿ ಹಲ್ಲೆ ನಡೆಸಲಾಗಿದೆ ಎಂದು ಆರೋಪಿಸಿದರು. ಈ ವೇಳೆ ಮುಖ, ತಲೆ, ಬೆನ್ನು ಸೇರಿದಂತೆ ದೇಹದ ವಿವಿಧ ಭಾಗಗಳಿಗೆ ಹಲ್ಲೆ ನಡೆಸಿದ್ದು, ಒಂದು ಹಲ್ಲು ಮುರಿದಿದೆ ಎಂದು ದೂರಿದರು.

ತಮ್ಮನ್ನು ಬೆತ್ತಲೆಗೊಳಿಸಿ ಅಮಾನವೀಯವಾಗಿ ಹಲ್ಲೆ ನಡೆಸಿದ್ದಲ್ಲದೆ, ಜಾತಿ ನಿಂದನೆ ಮಾಡಿ ಖಾಲಿ ಬಾಂಡ್ ಪೇಪರ್ ಹಾಗೂ ಬಿಳಿ ಹಾಳೆಗಳ ಮೇಲೆ ಬಲವಂತವಾಗಿ ಸಹಿ ಮಾಡಿಸಿಕೊಂಡಿದ್ದಾರೆ ಎಂದು ಆರೋಪಿಸಿದರು. ಮೊಬೈಲ್ ಮತ್ತು ಫೋನ್‌ಪೇ ಪಾಸ್‌ವರ್ಡ್‌ಗಳನ್ನು ಪಡೆದು ಖಾತೆಯಲ್ಲಿದ್ದ ಹಣದಲ್ಲಿ ?1.50 ಲಕ್ಷವನ್ನು ವರ್ಗಾವಣೆ ಮಾಡಿಕೊಂಡಿದ್ದಾರೆ ಎಂದು ಹೇಳಿದರು.

ಘಟನೆ ಕುರಿತು ಯಾರಿಗಾದರೂ ಮಾಹಿತಿ ನೀಡಿದರೆ ಜೀವ ತೆಗೆಯುವುದಾಗಿ ಬೆದರಿಕೆ ಹಾಕಿ ಬಳಿಕ ಬಳ್ಳಾರಿಯ ಎಸ್‌ಪಿ ಸರ್ಕಲ್ ಬಳಿ ಬಿಟ್ಟು ಹೋಗಿದ್ದಾರೆ ಎಂದು ತಿಳಿಸಿದರು. ಆರೋಗ್ಯ ಸಮಸ್ಯೆಯಿಂದ ಬಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ಕುಟುಂಬದವರ ಹಾಗೂ ಹಿರಿಯರ ಸಲಹೆಯಂತೆ ಪೊಲೀಸರಿಗೆ ದೂರು ಸಲ್ಲಿಸಲಾಗಿದೆ ಎಂದರು.

ಆರೋಪಿಗಳಾದ ನಿರಂಜನ ಮುಂಡರಗಿ, ನಟರಾಜ ಗೌಡ, ಫೋಟೋರಾಜ್ ಹಾಗೂ ಇತರರ ವಿರುದ್ಧ ಅಪಹರಣ, ಹಲ್ಲೆ, ಜಾತಿ ನಿಂದನೆ, ಹಣ ದೋಚಿಕೆ ಮತ್ತು ಜೀವ ಬೆದರಿಕೆ ಪ್ರಕರಣಗಳನ್ನು ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತಮ್ಮ ಹಾಗೂ ಕುಟುಂಬ ಸದಸ್ಯರ ಜೀವಕ್ಕೆ ಅಪಾಯವಿರುವುದರಿಂದ ಸೂಕ್ತ ಪೊಲೀಸ್ ರಕ್ಷಣೆ ನೀಡಬೇಕು. ಭವಿಷ್ಯದಲ್ಲಿ ಯಾವುದೇ ಅನಾಹುತ ಸಂಭವಿಸಿದರೆ ಅದಕ್ಕೆ ಆರೋಪಿಗಳೇ ನೇರ ಹೊಣೆಗಾರರು ಎಂದು ಸುದ್ದಿಗೋಷ್ಠಿಯಲ್ಲಿ ಎಚ್ಚರಿಕೆ ನೀಡಿದರು.

# ಬಾಲ ಕಾರ್ಮಿಕ ಪದ್ಧತಿಗೆ ನಿರ್ಮೂಲನೆ ಅಗತ್ಯ



**ಬೆಳಗಾವಿ ವಾರ್ತೆ ಹಗರಿಬೊಮ್ಮನಹಳ್ಳಿ:** ಬಾಲ ಕಾರ್ಮಿಕ ಪದ್ಧತಿ ಬಗ್ಗೆ ಸಮಾಜದ ಎಲ್ಲರಲ್ಲೂ ಜಾಗೃತಿ ಅಗತ್ಯ ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ತಾಲೂಕು ಕಾನೂನು ಸೇವೆಗಳ ಸಮಿತಿಯ ಸೈಯದ್ ಮೋಹಿದ್ದೀನ್ ಅಭಿಪ್ರಾಯ ಪಟ್ಟರು.

ಇಂದಿಲ್ಲಿ ನಡೆದ " ವಿಶ್ವ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನಾ ದಿನಾಚರಣೆ  2026ರ ಜಾಥಾ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸಿವ ಮೂಲಕ ಚಾಲನೆ ನೀಡಿ ಕಾರ್ಯಕ್ರಮದಲ್ಲಿ ಮಾತನಾಡಿದ ನ್ಯಾಯಾಧೀಶರು ನಾವು ಬಾಲ ಕಾರ್ಮಿಕರಾಗುವುದಿಲ್ಲ, ಬಾಲ ಕಾರ್ಮಿಕರಿಂದ ಉತ್ಪಾದಿಸಿದ ಸಾಮಾಗ್ರಿಗಳನ್ನು ಖರೀದಿಸುವುದಿಲ್ಲ ಹಾಗೂ ಬಳಸುವುದಿಲ್ಲ ಎಂದು ಪ್ರತಿಜ್ಞಾ ವಿಧಿ ಬೋಧಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ತಹಶೀಲ್ದಾರ ಆರ್,ಕವಿತ ಬಾಲ ಕಾರ್ಮಿಕ ಪದ್ಧತಿ ನಿಷೇಧ ಕಾಯಿದೆ ಜಾರಿಯಾಗಿದ್ದು, ಯಾವುದೇ ಮಗು ಬಾಲ ಕಾರ್ಮಿಕನಾಗಿ ದುಡಿಯುವುದು ಕಂಡುಬಂದರೆ ಕೂಡಲೇ ದೂರು ದಾಖಲಿಸಲು ಕರೆ ನೀಡಿದರು.

ನ್ಯಾಯಾಲಯದ ಆವರಣದಿಂದ ಆರಂಭವಾದ ಜಾಥಾ ತಂಬ್ರಹಳ್ಳಿ ಸರ್ಕಲ್ನಲ್ಲಿ ಮಾನವ ಸರಪಳಿ ನಿರ್ಮಿಸಿತು. ಅಲ್ಲಿಂದ ಬಸವೇಶ್ವರ ವೃತ್ತದವರೆಗೆ ಮೆರವಣಿಗೆ ಮಾಡಿ, ಅಲ್ಲಿ ಸಭೆ ನಡೆಸಲಾಯಿತು.

ತಾಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ, ತಾಲೂಕು ಆಡಳಿತ, ತಾಲೂಕು ಪಂಚಾಯತಿ, ಶಾಲಾ ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಪುರಸಭೆಯ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಸರಕಾರಿ ಅಭಿಯೋಜಕ ರಾಘವೇಂದ್ರ, ಇ ಓ ವಿಶ್ವನಾಥ ಬಾಲಯ್ಯನ ಕೋಟೆ , ತಾಲೂಕು ಆರೋಗ್ಯ ಅಧಿಕಾರಿ ಡಾ, ಪ್ರವೀಣ ಕುಮಾರ್, ಕಾರ್ಮಿಕ ನಿರೀಕ್ಷಕ ಪಾಂಡುರಂಗ, ಕ್ಷೇತ್ರ ಶಿಕ್ಷಣಾಧಿಕಾರಿ ಜಗದೀಶ್, ಸಿಡಿಪಿಓ ರಾಮನಗೌಡ, ಸಿಪಿಐ ವಿಕಾಸ ಲಮಾಣಿ, ವಕೀಲರ ಸಂಘದ ಅಧ್ಯಕ್ಷ ಕೊಟ್ರೇಶ್ ಶೆಟ್ಟರ್, ಪಿ ಎಸ್ ಐ ಉಮಾಪತಿ, ಪುರಸಭೆಯ ಮುಖ್ಯಾಧಿಕಾರಿ ಮುಗಳಿ, ವಕೀಲರ ಸಂಘದ ಉಪಾಧ್ಯಕ್ಷ ಬಿ ಎಂ ಆಂಜನೇಯ, ಕಾರ್ಯದರ್ಶಿ ಡಿ ಮಂಜಣ್ಣ, ಪೂರ್ಣಿಮಾ ಹಾಗೂ ಜಂಟಿ ಕಾರ್ಯದರ್ಶಿ ಪ್ರಹ್ಲಾದ ಭಾಗವಹಿಸಿದ್ದರು.

# ಮಹಿಳಾ ಸಬಲೀಕರಣಕ್ಕೆ ಹೊಲಿಗೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ

**ಬೆಳಗಾವಿ ವಾರ್ತೆ ಬಳ್ಳಾರಿ:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಡಿ.ಆರ್.ಡಿ.ಪಿ) ವತಿಯಿಂದ ಬಳ್ಳಾರಿ ತಾಲೂಕಿನ ಬಳ್ಳಾರಿ ಸಿಟಿ ವಲಯದ ಬಿ. ಗೋನಾಳ ಕಾರ್ಯಕ್ಷೇತ್ರದಲ್ಲಿ ಮಹಿಳೆಯರಿಗಾಗಿ ಮೂರು ತಿಂಗಳ ಉಚಿತ ಹೊಲಿಗೆ ತರಬೇತಿ ಕಾರ್ಯ ಕ್ರಮಕ್ಕೆ ಶುಕ್ರವಾರ ಚಾಲನೆ ನೀಡಲಾಯಿತು.

ವರಬಸಪ್ಪ ದೇವಸ್ಥಾನದ ಸಮೀಪ ಆಯೋಜಿಸಿದ್ದ ಕಾರ್ಯಕ್ರಮವನ್ನು ಜಿಲ್ಲಾ ನಿರ್ದೇಶಕ ರೋಹಿತಾಕ್ಷ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ಕೌಶಲ್ಯ ಅಭಿವೃದ್ಧಿ ತರಬೇತಿ ಗಳು ಅಗತ್ಯವಾಗಿದ್ದು, ಇಂತಹ ಕಾರ್ಯ ಕ್ರಮಗಳು ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಲಿವೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ರಾಜಣ್ಣ ಹಾಗೂ ಶೇಷಣ್ಣ, ತಾಲೂಕು ಯೋಜನಾಧಿಕಾರಿ ಬಸವರಾಜ್, ಹೊಲಿಗೆ ತರಬೇತಿ ಶಿಕ್ಷಕಿ ಬಸವರಾಜೇಶ್ವರಿ, ತಾಲೂಕು ಜ್ಞಾನವಿಕಾಸ ಸಮನ್ವಯಾಧಿಕಾರಿ ಆಶಾ ಹಾಗೂ ಸ್ಥಳೀಯ ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಮೂರು ತಿಂಗಳ ಅವಧಿಯ ಈ



ತರಬೇತಿಯ ಮೂಲಕ ಮಹಿಳೆಯರು ಹೊಲಿಗೆ ಕೌಶಲ್ಯವನ್ನು ಪಡೆದು ಸ್ವಯಂ ಉದ್ಯೋಗದತ್ತ ಹೆಜ್ಜೆ ಇಡಲಿದ್ದಾರೆ ಎಂದು ಸಂಘಟಕರು ತಿಳಿಸಿದರು.

## 6 ಜಿಲ್ಲೆಗಳ ಸುಮಾರು 1 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗಿ
## ಧಾರವಾಡದಲ್ಲಿ 4ನೇ ವಲಯ ಕಾರ್ಯಾಗಾರ ಆಯೋಜನೆ: ನ್ಯಾಯಾಧೀಶ ಎನ್.ವಿ.ವಿಜಯ

**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ರಾಜ್ಯ ಕಾನೂ ನು ಸೇವೆಗಳ ಪ್ರಾಧಿಕಾರ ಬೆಂಗ ಳೂರು, ಜಿಲ್ಲಾ ಕಾನೂ ನು ಸೇವೆಗಳ ಪ್ರಾಧಿ ಕಾರ ಧಾರವಾಡ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹುಬ್ಬಳ್ಳಿ ಹಾಗೂ ಧಾರವಾಡ ಕೃಷಿ ವಿಶ್ವವಿದ್ಯಾಲಯ ಇವುಗಳ ಸಂಯುಕ್ತಾಶ್ರಯದಲ್ಲಿ "ಫ್ರಾಮ್ ಕ್ಲಾಸ್ ರೂಮ್ ಟು ಕೋರ್ಟ ರೂಮ್" ಎನ್ನುವ ವಿಷಯದ ಕುರಿತು ಕಾನೂನು ವಿದ್ಯಾರ್ಥಿ ಗಳಿಗಾಗಿ 4 ನೇ ವಲಯ ಕಾರ್ಯಾಗಾರ 'ವನ್ನು ಜೂನ್ 14 ರಂದು ಬೆಳಿಗ್ಗೆ 10 ಗಂಟೆಗೆ ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ ಅವರು ಹೇಳಿದರು. ಇಂದು (ಜೂ.12) ಜಿಲ್ಲಾ ನ್ಯಾಯಾಲ ಯದ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ರು ಹಾಗೂ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಅನು ಶಿವರಾಮ್ ಅವರು ಕಾರ್ಯ ಕ್ರಮವನ್ನು ಉದ್ಘಾಟಿಸುವರು. ಕೃಷಿ ವಿಶ್ವವಿ ದ್ಯಾಲಯದ ಕುಲಪತಿಗಳಾದ ಡಾ.ಪಿ.ಯು. ಕೃಷ್ಣರಾಜ ಅವರು ಅಧ್ಯಕ್ಷತೆ ವಹಿಸುವರು. ಗೌರವ ಅತಿಥಿಗಳಾಗಿ ಉಚ್ಚ ನ್ಯಾಯಾಲ ಯದ ನ್ಯಾಯಮೂರ್ತಿಗಳಾದ ಎಸ್. ಸುನೀಲ್ ದತ್ ಯಾದವ, ಎಚ್.ಪಿ. ಸಂದೇಶ ಅವರು ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಶಶಿಧರ್ ಶೆಟ್ಟಿ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.(ಪ್ರೊ.) ಸಿ.ಬಸವರಾಜು ಅವರು ಪಾಲ್ಗೊಳ್ಳುವರು ಎಂದು ಅವರು ತಿಳಿಸಿದರು.



ಕಾನೂನು ಸೇವಾ ಪ್ರಾಧಿಕಾರ ಕಾಯ್ದೆ 1987 ಮತ್ತು ಅದರ ಉದ್ದೇಶಗಳು, ಕಾನೂನು ಕಾಲೇಜುಗಳಲ್ಲಿ ಕಾನೂನು ಸೇವೆಗಳ ಚಿಕಿತ್ಸಾಲಯಗಳು, ಕಾನೂನು ಸೇವಾ ಶಿಬಿರಗಳು ಮತ್ತು ಜನಸಂಪರ್ಕ ಕಾರ್ಯಕ್ರಮಗಳನ್ನು ಆಯೋಜಿಸುವುದು, ಕಾನೂನು ಶಿಕ್ಷಣ ಸಂಸ್ಥೆಗಳ ಪಾತ್ರ ವಿಷಯದ ಕುರಿತು ಗೋಷ್ಠಿಗಳು ಮತ್ತು ವಿದ್ಯಾರ್ಥಿಗಳೊಂದಿಗೆ ಚರ್ಚೆ ನಡೆಯು ಲಿವೆ. ಈಗಾಗಲೇ ಮೈಸೂರು, ಮಂಗಳೂ ರು ಹಾಗೂ ಬೆಂಗಳೂರಿನಲ್ಲಿ ಈ ರೀತಿಯ ಕಾರ್ಯಾಗಾರಗಳು ಜರುಗಿದ್ದವು. ಧಾರವಾಡದಲ್ಲಿ 4 ನೇ ಕಾರ್ಯಾಗಾರ ವನ್ನು ಆಯೋಜಿಸಲಾ ಗುತ್ತಿದೆ. ಸುಮಾರು 1200 ಜನರು ನೋಂದಣಿ ಮಾಡಿಕೊಂ ಡಿದ್ದಾರೆ. ಬಳ್ಳಾರಿ, ರಾಯಚೂರು, ಬಾಗಲ ಕೋಟ, ಕಾರವಾರ, ಹಾವೇರಿ, ಗದಗ ಜಿಲ್ಲೆಗಳ ಕಾಲೇಜುಗಳಿಂದ ವಿದ್ಯಾರ್ಥಿಗಳು ಭಾಗವಹಿಸುವರು. ಕಾರ್ಯಾಗಾರವು ಯುಟ್ಯೂಬ್ ನಲ್ಲಿ ನೇರ ಪ್ರಸಾರವಾಗಲಿದೆ. ವಿದ್ಯಾರ್ಥಿಗಳಿಗೆ ಕಾನೂನುಗಳ ಬಗ್ಗೆ ಅರಿವು ಮೂಡಿಸುವುದು ಈ ಕಾರ್ಯಾ ಗಾರದ ಮುಖ್ಯ ಉದ್ದೇಶವಾಗಿದೆ. ಸಾರ್ವಜನಿಕರು ಕಾನೂನುಗಳನ್ನು ಯಾವ ರೀತಿ ಬಳಕೆ ಮಾಡಬೇಕು ಎಂಬುದರ ಕುರಿತು ಜಾಗೃತಿ ಮೂಡಿಸುವುದು ಅವಶ್ಯಕವಾಗಿದೆ ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ & ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ ಎಂ.ಬಡಿಗೇರ, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶ ನಾಗರಾಜಪ್ಪ ಅವರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಬಡ್ಡಿ ಪಾವತಿಸಲು ವಿಫಲ; ಗೋಡೆ ಕೆಡವಿ, ಸಿಸಿಟಿವಿ ನಾಶ ಮಾಡಿದ ಮೈಕ್ರೋ ಫೈನಾನ್ಸ್ ಸಿಬ್ಬಂದಿ!

**ಬೆಳಗಾವಿ ವಾರ್ತೆ ಗದಗ:** ಬಡ್ಡಿ ಪಾವತಿ ವಿಳಂಬ ಮಾಡಿದ್ದಕ್ಕಾಗಿ ವ್ಯಕ್ತಿಯೊಬ್ಬರ ಮನೆಗೆ ಹಾನಿ ಮಾಡಿದ ಮೈಕ್ರೋ ಫೈನಾನ್ಸ್ ಸಿಬ್ಬಂದಿ ಸಿಸಿಟಿವಿ ಹಾಳು ಮಾಡಿರುವ ಘಟನೆ ಗದಗದಲ್ಲಿ ನಡೆದಿದೆ.

ಇದರಿಂದಾಗಿ ಕುಟುಂಬ ಸದಸ್ಯರು ಭಯಭೀತರಾಗಿ ಮನೆಯ ಆವರಣದಿಂದ ಹೊರಹೋಗಬೇಕಾಯಿತು. ಗದಗ ಪಟ್ಟಣದ ಕಳಸಾಪುರ ರಸ್ತೆಯ ಅಭಿನವ್ ಪ್ರದೇಶದಲ್ಲಿ ಈ ಘಟನೆ ನಡೆದಿದೆ. ಮನೆ ಮಾಲೀಕ ಕೋಟೇಶ್ ಬಗಲಿ, ಗದಗದ ಹಣಕಾಸು ಕಂಪನಿಯಿಂದ ಸಾಲ ಪಡೆದು ಮರುಪಾವತಿ ಮಾಡಲು ವಿಫಲರಾಗಿದ್ದರು.

ಶ್ರೀಕಾಂತ್ ಎಂಬುವರು ಮಣ್ಣು ತೆಗೆಯುವ ಯಂತ್ರವನ್ನು ನೇಮಿಸಿಕೊಂಡು ಕಾಂಪೌಂಡ್ ಅನ್ನು ಕೆಡವಿದರು. ಬಗಲಿ ಕುಟುಂಬದ ಸದಸ್ಯರೊಬ್ಬರು, ಹಣಕಾಸು ಕಂಪನಿಯೊಂದು ಬಲವಂತವಾಗಿ ಎರಡು ಖಾಲಿ ಚೆಕ್‌ಗಳನ್ನು ತೆಗೆದುಕೊಂಡಿದ್ದಾರೆ. ಸಿಬ್ಬಂದಿ ತಾವು ನೀಡಿದ್ದಕ್ಕಿಂತ ಹೆಚ್ಚಿನ ಹಣಕ್ಕಾಗಿ ಬೇಡಿಕೆ ಇಟ್ಟರು ಎಂದು ಆರೋಪಿಸಿದರು.

ಮೈಕ್ರೋ ಫೈನಾನ್ಸ್ ಸಿಬ್ಬಂದಿ ತನಗೆ ಶಸ್ತ್ರಾಸ್ತ್ರಗಳನ್ನು ತೋರಿಸಿ ಬೆದರಿಕೆ ಹಾಕಿದರು. ಕುಟುಂಬ ಸದಸ್ಯರು ಮಹಿಳೆಯರು ಮತ್ತು ಮಕ್ಕಳನ್ನು ಭಯದಿಂದ ಬೇರೆ ಪಟ್ಟಣಕ್ಕೆ ಕಳುಹಿಸಿದರು ಎಂದು ಆ ವ್ಯಕ್ತಿ ಹೇಳಿದರು. ಮೀಟರ್ ಬಡ್ಡಿಗೆ ಸಂಬಂಧಿಸಿದ ಹಲವಾರು ಪ್ರಕರಣಗಳಲ್ಲಿ ಇದು ಒಂದಾಗಿದೆ, ಅವುಗಳಲ್ಲಿ ಹೆಚ್ಚಿನವು ಜಿಲ್ಲೆಯಲ್ಲಿ ಗಮನಕ್ಕೆ ಬರುತ್ತಿಲ್ಲ. ಕಿರುಕುಳ ಎದುರಾದಾಗ ಜನರಿಗೆ ತಿಳಿಸುವಂತೆ ಪೊಲೀಸ್ ಅಧಿಕಾರಿಗಳು ಜನರಿಗೆ ತಿಳಿಸಿದ್ದಾರೆ. ಬುಧವಾರ, ಅಧಿಕಾರಿಗಳು ಅನೇಕ ರೌಡಿ ಶೀಟರ್‌ಗಳಿಗೆ ಯಾವುದೇ ಚಟುವಟಿಕೆಗಳಲ್ಲಿ ತೊಡಗದಂತೆ ಎಚ್ಚರಿಕೆ ನೀಡಿದರು.

ಜೀವನ್ ಎಂಬ ಫೈನಾನ್ಶಿಯರ್ ಕಳೆದ ವಾರ ಹಣ ಕೇಳಿದರು ಮತ್ತು ನಾನು ಊರಿನಲ್ಲಿ ಇಲ್ಲ ಎಂದು ಹೇಳಿದಾಗ, ಅವರು ನನ್ನ ಮನೆಗೆ ಬಂದು ಎರಡು ಖಾಲಿ ಚೆಕ್‌ಗಳನ್ನು ತಂದು ನನ್ನ ಕುಟುಂಬ ಸದಸ್ಯರಿಗೆ ಬೆದರಿಕೆ ಹಾಕಿದ್ದಾರೆ. ಅವರು ಹೆಚ್ಚಿನ ಬಡ್ಡಿ ಕೇಳುತ್ತಿದ್ದಾರೆ. ನಮಗೆ ನ್ಯಾಯ ಬೇಕು. ಅವರು ಟಿವಿ, ಸಿಸಿಟಿವಿ, ಬೈಕ್‌ಗೆ ಹಾನಿ ಮಾಡಿದ್ದಾರೆ ಮತ್ತು ಮಣ್ಣು ತೆಗೆಯುವ ಯಂತ್ರವನ್ನು ಬಳಸಿ ನಮ್ಮ ಕಾಂಪೌಂಡ್ ಗೋಡೆಯನ್ನು ಕೆಡವಿದ್ದಾರೆ" ಎಂದು ಕೋಟೇಶ್ ಬಗಾಲಿ ಹೇಳಿದರು. ಈ ಸಂಬಂಧ ಪ್ರಕರಣ ದಾಖಲಿಸಿದ್ದು, ತನಿಖೆ ಪ್ರಗತಿಯಲ್ಲಿದೆ ಎಂದು ಪೊಲೀಸರು ಹೇಳಿದರು.

## "ವಿಶ್ವ ತಂಬಾಕು ರಹಿತ ದಿನಾಚರಣೆ; ಜನಜಾಗೃತಿ ಜಾಥಾ ಕಾರ್ಯಕ್ರಮ"

**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲ ಯ ಮತ್ತು ಸಂಶೋಧನಾ ಸಂಸ್ಥೆ, ಸರಕಾರಿ ನರ್ಸಿಂಗ್ ಶಾಲೆ ಮತ್ತು ಮಹಾ ವಿದ್ಯಾಲಯ ಕೆ.ಎಂ.ಸಿ.ಆರ್.ಐ. ಹುಬ್ಬಳ್ಳಿ ಇವರ ಸಂಯುಕ್ತ ಆಶ್ರಯದಲ್ಲಿ, "ವಿಶ್ವ ತಂಬಾಕು ರಹಿತ ದಿನಾಚರಣೆ ಮೇ–31–2026" ಅಂಗವಾಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಜನಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಮಾನ್ಯ ನಿರ್ದೇಶಕರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ಡಾ.ಕೆ. ಎಫ್. ಕಮ್ಮಾರ ಹಾಗೂ ಮಾನ್ಯ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಪರಶುರಾಮ ಎಫ್.ಕೆ. ಜಾಗೃತಿ ಜಾಥಾಕ್ಕೆ ಜಂಟಿಯಾಗಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಡಾ.ಕೆ. ಎಫ್. ಕಮ್ಮಾರ ಯುವಜನತೆ ದೇಶದ ಭವಿಷ್ಯ ತಂಬಾಕು ಉದ್ಯಮಗಳು ಆಕರ್ಷಕ ಜಾಹೀರಾತುಗಳ ಮೂಲಕ ಯುವಕರನ್ನು ಬಲಿಪಶು ಮಾಡುತ್ತಿವೆ. ಇಂತಹ ಮೋಸದ ತಂತ್ರಗಳಿಗೆ ಬಲಿಯಾಗದೆ ತಂಬಾಕಿನಿಂದ ದೂರವಿರೋಣ. ಇಂದೇ ತಂಬಾಕು ತ್ಯಜಿಸಿ, ಆರೋಗ್ಯಕರ ಮತ್ತು ಸುಂದರ ಭವಿಷ್ಯವನ್ನು ರೂಢಿಸಿಕೊಳ್ಳಿ ಎಂದು ಹೇಳಿದರು.

ಮಾನ್ಯ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಪರಶುರಾಮ ಎಫ್.ಕೆ. ಇವರು ಮಾತನಾಡಿ ತಂಬಾಕಿನ ದುಷ್ಪರಿಣಾಮಗಳ ಬಗ್ಗೆ ಕರ್ನಾಟಕ ಸರ್ಕಾರದ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಮೂಲಕ ನಿರಂತರವಾಗಿ ಜಾಗೃತಿ ಮೂಡಿಸಲಾಗುತ್ತಿದೆ. ಕೇವಲ ಕಾನೂನು ಅಥವಾ ದಂಡ ವಿಧಿಸುವುದರಿಂದ ಇದನ್ನು ತಡೆಯಲು ಸಾಧ್ಯವಿಲ್ಲ. ಪ್ರತಿಯೊಬ್ಬರು ಸ್ವಯಂ ಪ್ರೇರಿತರಾಗಿ ತಂಬಾಕು ಉತ್ಪನ್ನಗಳನ್ನು ತ್ಯಜಿಸಬೇಕು.



ಯುವಜನರು ಈ ಚಟಕ್ಕೆ ಬಲಿಯಾಗದಂತೆ ತಡೆಯುವುದು ಮತ್ತು ಆರೋಗ್ಯಕರ ಸಮಾಜವನ್ನು ನಿರ್ಮಿಸುವುದು ನಮ್ಮೆಲ್ಲರ ಆಧ್ಯತೆಯಾಗಬೇಕು ಎಂದರು.

ಸದರಿ ಜಾಥಾದಲ್ಲಿ 150–200 ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದ್ದು, ಜಾಥಾವು ಸರಕಾರಿ ಶುಶ್ರೂಷಕ ಶಾಲೆ ಮತ್ತು ಮಹಾವಿದ್ಯಾಲಯದಿಂದ ಪ್ರಾರಂಭವಾಗಿ ಪೈ ಹೋಟೆಲ್ ಸುತ್ತಮುತ್ತ ಹಾಗೂ ಭೈಲಪ್ಪನವರ ನಗರ ಸಂಚರಿಸಿ ಮಧ್ಯದಲ್ಲಿ ಸಾರ್ವಜನಿಕರಿಗೆ ಹಾಗೂ ಪಾನಶಾಪ ಅಂಗಡಿ ಮಾಲೀಕರುಗಳಿಗೆ ಕರಪತ್ರ ಹಂಚುವ ಮೂಲಕ ಜಾಗೃತಿ ಮೂಡಿಸಲಾಯಿತು.

ತಂಬಾಕು ಬಿಡಿ –ಆರೋಗ್ಯ ಉಳಿಸಿ, ತಂಬಾಕು ಮುಕ್ತ ಭಾರತ– ನಮ್ಮೆಲ್ಲರ ಗುರಿ, ತಂಬಾಕು ಮುಕ್ತ ಯುವ ಜನತೆ –ದೇಶದ ಶಕ್ತಿ, ತಂಬಾಕು ಬೇಡ– ಆರೋಗ್ಯ ಬೇಕು ಎಂಬ ಆರೋಗ್ಯ ಸಂದೇಶಗಳನ್ನು ಕೂಗುತ್ತಾ ಮರಳಿ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ & ಸಂಶೊಧನಾ ಸಂಸ್ಥೆ ಆವರಣದಲ್ಲಿ ಮುಕ್ತಾಯವಾಯಿತು. ಕಾರ್ಯಕ್ರಮದಲ್ಲಿ ವೈದ್ಯಕೀಯ ಅಧೀಕ್ಷಕರಾದ ಡಾ ಈಶ್ವರ ಹಸಬಿ, ಸಾರ್ವಜನಿಕ ಸಂಪರ್ಕ ಅಧಿಕಾರಿಗಳಾದ ಶ್ರೀ ಸಂತೋಷ ಕಟ್ಟಿಮನಿ, ಸರಕಾರಿ ಶೂಶ್ರುಷಕ ಶಾಲೆಯ ಪ್ರಾಂಶುಪಾಲರಾದ ಶ್ರೀ ರವೀಶಕುಮಾರ ಹಾಗೂ ಪ್ರಾಧ್ಯಾಪಕರು, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಹೇಶ ಚಿತ್ತರಗಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀ ಬಿ.ಆರ್. ಪಾತ್ರೋಟ, ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಎಮ್.ಎನ್ ಅಗಡಿ ಹಾಗೂ ಶ್ರೀ ಎಸ್.ಎಸ್. ತಿವಾರಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಶ್ರೀ ಎಮ್.ಐ ಕಲ್ಲಪ್ಪನವರ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗದವರು ಭಾಗವಹಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ರೇಖಾ ಬಾಡಗಿ ಸ್ವಾಗತಿಸಿ ವಂದಿಸಿದರು.

## ಗೃಹಲಕ್ಷ್ಮೀ ಯೋಜನೆ ಸೌಲಭ್ಯ ವಿತರಣೆಯಲ್ಲಿ ವಿಳಂಬ ಸಲ್ಲದು



**ಬೆಳಗಾವಿ ವಾರ್ತೆ ಗದಗ :** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮೀ ಯೋಜನೆಯ ಸೌಲಭ್ಯ ವಿತರಣೆಯಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ರೂಮ್ ನಂ. 122 ರಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಗುರುವಾರ ಜರುಗಿದ ಗೃಹಲಕ್ಷ್ಮೀ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರಿಗೆ ಸ್ವಾವಲಂಬಿ ಜೀವನ ನಡೆಸಲು ಹಾಗೂ ಆರ್ಥಿಕ ಸಬಲೀಕರಣಗೊಳಿಸಲು ರಾಜ್ಯ ಸರ್ಕಾರ ಗೃಹ ಲಕ್ಷಿ??ೀ ಯೋಜನೆಯನ್ನು ಜಾರಿಗೊಳಿಸಿದ್ದು ಈ ಸೌಲಭ್ಯದಿಂದ ಯಾವ ಅರ್ಹ ಫಲಾನುಭವಿಯೂ ವಂಚಿತರಾಗದಂತೆ ನೋಡಿಕೊಳ್ಳಬೇಕು. ಗದಗ ಜಿಲ್ಲೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಲು ಇಲಾಖೆಯ ಅಧಿಕಾರಿಗಳು ವಿಶೇಷ ಆಸಕ್ತಿ ಕಾರ್ಯನಿರ್ವಹಿಸಬೇಕು. ಗೃಹಲಕ್ಷ್ಮೀ ಯೋಜನೆಯ ಹಣ ದುರುಪಯೋಗವಾಗದಂತೆ ಕ್ರಮ ವಹಿಸಬೇಕು. ಮರಣ ಹೊಂದಿದವರ ಖಾತೆಗ ಗೃಹಲಕ್ಷ್ಮೀ ಹಣ ಜಮಾ ಆಗುತ್ತಿದ್ದರೆ ಅಂತಹ ಪ್ರಕರಣಗಳಾಗದಂತೆ ತಡೆಯಲು ಕ್ರಮ ವಹಿಸಬೇಕು. ಒಂದು ವೇಳೆ ಮರಣ ಹೊಂದಿದವರ ಖಾತೆಗೆ ಗೃಹಲಕ್ಷ್ಮೀ ಹಣ ಜಮೆಯಾಗಿದ್ದರೆ ಅಂತಹ ಹಣವನ್ನು ಸರ್ಕಾರಕ್ಕೆ ಮರುಪಾವತಿಗೆ ಕ್ರಮ ವಹಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು ಆಯಾ ವ್ಯಾಪ್ತಿಯಲ್ಲಿನ ಮನೆ ಮನೆಗೆ ತೆರಳಿ ಸಮೀಕ್ಷೆ ನಡೆಸಿ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳ ವಿವರ ಹಾಗೂ ಮರಣ ಹೊಂದಿದವರ ಸಂಪೂರ್ಣ ವಿವರಗಳನ್ನು ಸಂಗ್ರಹಿಸಲು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ನಿರ್ದೇಶನ ನೀಡಬೇಕು. ಈ ವರದಿಯನ್ನು ಎಲ್ಲ ಬ್ಯಾಂಕುಗಳಿಗೆ ಸಲ್ಲಿಸಬೇಕು. ಒಟ್ಟಾರೆಯಾಗಿ ಗೃಹಲಕ್ಷ್ಮೀ ಯೋಜನೆಯ ಸೌಲಭ್ಯ ಪೂರ್ಣಪ್ರಮಾಣದಲ್ಲಿ ಸದ್ಬಳಕೆಯಾಗಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಸದಸ್ಯರಾದ ಅಶೋಕ ಮಂದಾಲಿ ಮಾತನಾಡಿ ಗೃಹಲಕ್ಷ್ಮೀ ಯೋಜನೆಯಗೆ ಸಂಬಂಧಿಸಿದಂತೆ ಆಧಾರ್ ಸೀಡಿಂಗ್ ಸಮಸ್ಯೆ ಹಾಗೂ ತಾಂತ್ರಿಕ ತೊಂದರೆಗಳೇನಾದರೂ ಇದ್ದಲ್ಲಿ ಪರಿಶೀಲನೆ ನಡೆಸಬೇಕು. ಯೋಜನೆಯ ಸೌಲಭ್ಯದ ಫಲಾನುಭವಿಗಳ ಮನೆ ಮನೆ ಸರ್ವೆ ಕಾರ್ಯ ಮಾಡುವಲ್ಲಿ ವಿಳಂಬ ಮಾಡಬಾರದು. ಗೃಹಲಕ್ಷ್ಮೀ ಯೋಜನೆಯ ಹಣ ಪಾವತಿ ಮಾಡುವ ಸಂದರ್ಭದಲ್ಲಿ ಅನುದಾನದ ಕೊರತೆಯಿದ್ದರೆ ಸರ್ಕಾರಕ್ಕೆ ತ್ವರಿತವಾಗಿ ಅನುದಾನ ಬಿಡುಗಡೆಗಾಗಿ ಪತ್ರ ಬರೆಯಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ರಾಧಾ ಮಣ್ಣೂರ ಪ್ರಾಸ್ತಾವಿಕವಾಗಿ ಮಾತನಾಡಿ ಗೃಹಲಕ್ಷೀ ಯೋಜನೆಯು ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದ್ದು ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವ ಉದ್ದೇಶ ಹೊಂದಿದೆ. ಸೌಲಭ್ಯ ವಿತರಣೆಯಲ್ಲಿ ತಾಂತ್ರಿಕ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಈ ಸಭೆಯನ್ನು ಆಯೋಜಿಸಲಾಗಿದೆ ಎಂದರು.

ಗೃಹಲಕ್ಷ್ಮೀ ಯೋಜನೆಯಡಿ ಗದಗ ಜಿಲ್ಲೆಯಲ್ಲಿ ಫೆಬ್ರುವರಿ 2026 ಮಾಹೆಯಲ್ಲಿ 261860 ಅರ್ಜಿಗಳು ಸ್ವೀಕೃತಗೊಂಡ / ನೊಂದಣಿಯಾಗಿದ್ದು ಅದರಲ್ಲಿ 252843 ಅರ್ಜಿಗಳು ಮಂಜೂರಾಗಿವೆ. ಶೇ.96.56 ರಷ್ಟು ಪ್ರಗತಿ ಸಾಧಿಸಲಾಗಿದೆ. ತಾಲೂಕಾವಾರು ಸಾಧನೆ ಇಂತಿದೆ: ಗದಗ– 96.50 %, ಗಜೇಂದ್ರಗಡ– 96.14 %, ಲಕ್ಷೆ??ೀಶ್ವರ– 96.83 %, ಮುಂಡರಗಿ– 96.52 % , ನರಗುಂದ  96.62 % , ರೋಣ– 96.53 % ಹಾಗೂ ಶಿರಹಟ್ಟಿ– 96.97 % ರಷ್ಟು ಸಾಧನೆಯಾಗಿದೆ ಎಂದು ಸಂಬಂಧಿತ ಅಧಿಕಾರಿಗಳು ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಗೃಹಲಕ್ಷ್ಮೀ ಯೋಜನೆ ಸೌಲಭ್ಯ ವಿತರಣೆ ಸಂಬಂಧಿಸಿದಂತೆ ಉಂಟಾಗುತ್ತಿರುವ ಇಕೈವೈಸಿ, ಎನ್‌ಪಿಸಿಐ , ಜಿಎಸ್‌ಟಿ ಮುಂತಾದ ತಾಂತ್ರಿಕ ಸಮಸ್ಯೆಗಳ ಕುರಿತು ವಿವರವಾದ ಚರ್ಚೆ ನಡೆಯಿತು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ಫಕ್ರುಸಾಬ ಚಿಕ್ಕಮಣ್ಣೂರ, ಪಿ.ಬಿ.ಅಳಗವಾಡಿ, ಸದಸ್ಯರುಗಳಾದ ವೀರಣ್ಣ ಪಠಪತಿ, ವಿವೇಕ ಯಾವಗಲ್, ಸಂಗನಗೌಡ ಪಾಟೀಲ, ಶರಣಪ್ಪ ಬೆಟಗೇರಿ, ಮಹಿಳಾ ಇಲಾಖೆಯ ನಿರೂಪಣಾಧಿಕಾರಿ ಮಹಾಂತೇಶ ಪೂಜಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಆಧಿಕಾರಿ ಜಯಶ್ರೀ ಆರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಅಧೀಕ್ಷಕರಾದ ರಾಜು ಕಂಠಿಗೊಣ್ಣನವರ, ಅಂಗನವಾಡಿ ಮೇಲ್ವಿಚಾರಕರು, ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು.

ಶ್ರೀಮತಿ ರೇಣುಕಾ ಪ್ರಾರ್ಥಿಸಿದರು. ಶ್ರೀಮತಿ ವಿಜಯಲಕ್ಷೀ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.



## ಮುದ್ದೇಬಿಹಾಳ: ತಾಲೂಕು ಪಂಚಾಯಿತಿ ಇಒಗೆ ನೂತನ ವಾಹನ ಹಸ್ತಾಂತರ: ಶಾಸಕ ಸಿ.ಎಸ್. ನಾಡಗೌಡ ಚಾಲನೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಮುದ್ದೇಬಿಹಾಳ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಕ್ಷೇತ್ರ ಭೇಟಿ ಹಾಗೂ ಆಡಳಿತಾತ್ಮಕ ಕೆಲಸಗಳ ಸುಗಮ ನಿರ್ವಹಣೆಗಾಗಿ ಖರೀದಿಸಲಾಗಿರುವ ನೂತನ ಬೊಲೆರೊ ವಾಹನಕ್ಕೆ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಾಬೂನು ಮತ್ತು ಮಾರ್ಜಕ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಚಾಲನೆ ನೀಡಿದರು.

ವಾಹನಕ್ಕೆ ಅಧಿಕೃತವಾಗಿ ಚಾಲನೆ ನೀಡಿದ ನಂತರ ಮಾತನಾಡಿದ ಶಾಸಕ ಸಿ.ಎಸ್. ನಾಡಗೌಡ ಅವರು, ತಾಲೂಕು ಪಂಚಾಯಿತಿಗೆ ನೂತನ ವಾಹನ ಲಭ್ಯವಾಗಿರುವುದು ಆಡಳಿತಕ್ಕೆ ಹೆಚ್ಚಿನ ಉತ್ತೇಜನ ನೀಡಲಿದೆ. ಈ ವಾಹನವನ್ನು ಬಳಸಿಕೊಂಡು ಅಧಿಕಾರಿಗಳು ನಿರಂತರವಾಗಿ ಕ್ಷೇತ್ರ ಭೇಟಿ ಕೈಗೊಳ್ಳಬೇಕು. ವಿಶೇಷವಾಗಿ ಹಳ್ಳಿಗಳಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ಯಾವುದೇ ಸಮಸ್ಯೆಗಳು ತಲೆದೂರದಂತೆ ಎಚ್ಚರಿಕೆ ವಹಿಸಿ ತಕ್ಷಣವೇ ಪರಿಹರಿಸುವ ಮೂಲಕ ಅಭಿವೃದ್ಧಿ ಕೆಲಸಗಳನ್ನು ಚುರುಕುಗೊಳಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಂಗನಗೌಡ ಬಿರಾದಾರ ಅವರು, ನೂತನ ವಾಹನದ ಸೌಲಭ್ಯ ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಶಾಸಕರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿಷಯ ನಿರ್ವಾಹಕ ಆನಂದಗೌಡ ಬಿರಾದಾರ, ವಾಹನ ಚಾಲಕ ಮಂಜುನಾಥ ಗುಡಿಮನಿ ಹಾಗೂ ತಾಲೂಕು ಪಂಚಾಯಿತಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ವಿವಿಧ ಕಾಲೇಜುಗಳಲ್ಲಿನ ವಾಣಿಜ್ಯ ವಿಭಾಗದ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಧಾರವಾಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹುಬ್ಬಳ್ಳಿ ಅಂಚಟಗೇರಿಯ ಡಾ॥ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಧಾರವಾಡ ಜಯನಗರದ ಯುವರತ್ನ ಕರಿಯರ್ ಅಕಾಡೆಮಿ ಹತ್ತಿರದಲ್ಲಿರುವ ಮಹಿಳಾ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ವಿಭಾಗದಲ್ಲಿ ವ್ಯಾಸಂಗ ಮಾಡಲು ಖಾಲಿ ಉಳಿದ ಕೆಲವು ಸೀಟುಗಳಿಗೆ ಎಸ್.ಎಸ್.ಎಲ್.ಸಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಸೂಕ್ತ ವಿದ್ಯಾರ್ಹತೆವುಳ್ಳ ವಿದ್ಯಾರ್ಥಿಗಳು ಆಫ್‌ಲೈನ್ ಮೂಲಕ ಜೂನ್ 22, 2026 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:0836–2971590, 8310998779, 7337768683 ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001